ಕಲ್ಯಾಣ ಕರ್ನಾಟಕದ ಪ್ರತಿಬಿಂಬ......

ವಿಜಯನಗರ ಜಿಲ್ಲಾ ಆವೃತ್ತಿ

# ವಾರ್ತಾ ಲೋಕ

ಕನ್ನಡ ದಿನಪತ್ರಿಕೆ

"VARTHA LOKA" Kannada Daily Morning News Paper, VIJAYNAGAR. Dist.: Vijaynagar

ಕೊಪ್ಪಳ | ರಾಯಚೂರು | ಬಳ್ಳಾರಿ | ವಿಜಯನಗರ | ಯಾದಗಿರಿ | ಬೆಂಗಳೂರು | ಬೀದರ ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿ ಏಕಕಾಲಕ್ಕೆ ಪ್ರಕಾಶಿತ

ಸಂಪಾದಕರು: ಎಸ್. ವಿ. ಕುಲಕರ್ಣಿ ಜಿ.　　ಸ್ಥಾನಿಕ ಸಂಪಾದಕರು: ಮೊಹಮ್ಮದ ಜಿಲಾನ ಜಿ.

ವಾರ್ತಾ ಲೋಕ
ಕನ್ನಡ ದಿನ ಪತ್ರಿಕೆ ಕಛೇರಿ
ರಾಜಾಸಾಬ ಕಂಪೌಂಡ್,
ಕುಲಾಯಪ್ಪ ಬಿಲ್ಡಿಂಗ್
ಎದುರುಗಡೆ, 1ನೇ ಕ್ರಾಸ್
ಪಟೇಲ್ ನಗರ,
ಹೊಸಪೇಟೆ
ಮೊ.ನಂ : 9482156289

E-mail ID : varthalokahpt@gmail.com

VOLUME : 01 | ISSUE : 145 | Sunday 20-10-2024 | RNI No.: KARKAN/2010/47633 | Page : 4+II | Mob. No. : 9482156289 | Price : ₹3/-

## ಸಂಕ್ಷಿಪ್ತ ವಾರ್ತೆ

### ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ 2 ಕೋಟಿ ಭೂಮಿ ಪೂಜೆ ನೆರವೇರಿಸಿದ ಶಾಸಕ –ಡಾ. ಶ್ರೀನಿವಾಸ್. ಎನ್. ಟಿ



● ವಾರ್ತಾಲೋಕ ವಾರ್ತೆ

**ಹೊಸಹಳ್ಳಿ : ಅ19** ಹೋಬಳಿ ವ್ಯಾಪ್ತಿಯಲ್ಲಿ *ಇಮ್ಮಡಾಪುರ, ಕಾ ನಹೊಸಹಳ್ಳಿ, ಚಿಕ್ಕಕುಂಬಳಕುಂಟೆ, ಹಿರೇಕುಂಬಳಕುಂಟೆ ಗ್ರಾಮಗಳಲ್ಲಿ ಮಾನ್ಯಶಾಸಕರಾದ ಡಾ. ಶ್ರೀನಿವಾಸ್. ಎನ್. ಟಿ. ಅವರು* ಶುಕ್ರವಾರದಂದು *ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ* ಭೂಮಿಪೂಜೆ ನೆರವೇರಿಸಿ ಮಾತನಾಡುತ್ತಾ, *ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ನಾನು ಬಂದಿರುವೆ. ಪ್ರಾಮಾಣಿಕವಾಗಿ ಶ್ರಮವಹಿಸಿ ಕೆಲಸ ಮಾಡುತ್ತೇನೆ ಎಂದೂ ತಿಳಿಸಿದರು. ಆದ್ದರಿಂದ ಗುತ್ತಿಗೆದಾರರು ಮತ್ತು ಗ್ರಾಮಗಳ ಅಭಿವೃದ್ಧಿ ವಿಷಯದಲ್ಲಿ ಮುಖಂಡರು ಒಗ್ಗಟ್ಟಾಗಿ ಕೆಲಸ ಮಾಡಬೇಕು* ಎಂದೂ ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯರಾದ ಕೆಎಂ ಶಶಿಧರ ಸ್ವಾಮಿ,ವಿರೇಶಸ್ವಾಮಿ, ವೆಂಕಟೇಶ ಕೆ, ಸಂಗಣ್ಣ ಎಸ್, ರಾಘವೇಂದ್ರ ಎಂ, ನಾಗೇಂದ್ರಪ್ಪ ಎಂ, ಪ್ರಭಾಕರ್ ಕೆ, ಗೋಪಾಲಪ್ಪ ಬಿ, ಚೇತನ್, ಬೋರಣ್ಣ, ಪೊಟೋ ಸಿದ್ದಲಿಂಗಪ್ಪ, ಮಂಜುನಾಥ, ದುಗ್ಗಪ್ಪ, ನಾಗರಾಜ ಏ.ಕೆ, ಖಲಂದರ, ಆಂಜನೇಯ ,ಉಮೇಶಪ್ಪ, ಮನೋಜ್, ವೀರಭದ್ರಪ್ಪ, ಮಲ್ಲಿಕಾರ್ಜುನ, ಹರೀಶ್,ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಗ್ರಾಮಸ್ಥರು, ಇನ್ನೂ ಮುಂತಾದವರು ಉಪಸ್ಥಿತರಿದ್ದರು.

ವರದಿ ಹೆಚ್ಚು ವೀರಣ್ಣ.

### ಜಮೀನಿನಲ್ಲಿ ರೈತನಿಗೆ ಹಾವು ಕಚ್ಚಿ ಸಾವು

● ವಾರ್ತಾಲೋಕ ವಾರ್ತೆ



**ಕೂಡ್ಲಿಗಿ : ಅ 19.** ತಮ್ಮ ಹೊಲದಲ್ಲಿ ಧನಗಳಿಗೆ ಹುಲ್ಲು ಕೊಯ್ಯುವಾಗ ರೈತನೋರ್ವನಿಗೆ ಎಡಗೈ ಮದ್ಯದ ಬೆರಳಿಗೆ ವಿಷಜಂತು ಹಾವೊಂದು ಕಚ್ಚಿದ ಪರಿಣಾಮ ಮೃತಪಟ್ಟ ಘಟನೆ ವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲೂಕಿನ ಗುಡೇಕೋಟೆ ಗ್ರಾಮದಲ್ಲಿ ಗುರುವಾರ ಜರುಗಿದೆ.

ಗುಡೇಕೋಟೆ ಎಂ.ಚಂದ್ರಪ್ಪ (27) ಎಂಬ ರೈತನೇ ಹಾವು ಕಚ್ಚಿದ ಪರಿಣಾಮ ಮೃತಪಟ್ಟ ದುರ್ದೈವಿಯಾಗಿದ್ದಾನೆ. ಈತನು ಲಿಂಗನಹಳ್ಳಿ ತಾಂಡದ ಬಳಿ ಇರುವ ಇವರ ಜಮೀನಿನಲ್ಲಿ ಗುರುವಾರ ಸಂಜೆ 4.30 ಗಂಟೆ ಸುಮಾರಿಗೆ ಧನಗಳಿಗೆ ಹುಲ್ಲು ಕೊಯ್ಯುವಾಗ ಅಲ್ಲೇ ಎಲ್ಲೋ ಹುಲ್ಲಿನೊಳಗಿದ್ದ ಇದ್ದ ವಿಷಜಂತು ಹಾವೊಂದು ಕಚ್ಚಿದ ಪರಿಣಾಮ ತಕ್ಷಣ ಆತನನ್ನು ಗುಡೇಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಯಿತಾದರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆಂದು ಮೃತನ ಹೆಂಡತಿ ಶಾಂತಮ್ಮ ನವರು ನೀಡಿದ ದೂರಿನಂತೆ ಗುಡೇಕೋಟೆ ಪೊಲೀಸ್ ಠಾಣೆಯ ಪಿಎಸ್ಐ ಸುಬ್ರಮಣ್ಯಂ ಜಿ. ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ವರದಿ ಎಚ್ ವೀರಣ್ಣ.

### ಎತ್ತಿನ ಬೂದಿಹಾಳ ಗ್ರಾಮದಲ್ಲಿ ವಾಲ್ಮೀಕಿ ಜಯಂತಿ ಆಚರಣೆ



● ವಾರ್ತಾಲೋಕ ವಾರ್ತೆ

**ಬಳ್ಳಾರಿ :ಅ19.** ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಮಾನವರಲ್ಲಿ ಸಂಪನ್ನತೆ ಸಜ್ಜನಿಕೆ ಮತ್ತು ಸಂಸ್ಕಾರಯುತ ಜೀವನವನ್ನು ನಡೆಸಲು ಮಾರ್ಗದರ್ಶಕ ಗ್ರಂಥವಾಗಿದೆ ಎಂದು ಬಸವರಾಜ್ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಎತ್ತಿನ ಬೂದಿಹಾಳು ಗ್ರಾಮದಲ್ಲಿ ವಾಲ್ಮೀಕಿ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನಂತರ ಶ್ರೀ ಮಹರ್ಷಿ ವಾಲ್ಮೀಕಿ ಪುತ್ತಳಿಗೆ ಹೂವಿನ ಅಲಂಕಾರ ಮಾಡಿ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿದರು.

ನಂತರ ಜಯಂತಿಯಲ್ಲಿ ಸೇರಿದ ಜನರಿಗೆ ಊಟದ ವ್ಯವಸ್ಥೆಯನ್ನು ಸಹ ಮಾಡಲಾಗಿತ್ತು ಎಂದು ವಾಲ್ಮೀಕಿ ಜನಾಂಗದ ಮುಖಂಡರಾದ ಪಾಲ್ ಬಸವರಾಜ್ ತಿಳಿಸಿದರು.

ಈ ಸಂದರ್ಭದಲ್ಲಿ, ಜಗನ್ ಮೋಹನ್ ರೆಡ್ಡಿ, ಬಸವರಾಜ್, ಟಿ,ಬಸಪ್ಪ, ಯರಿ ಸ್ವಾಮಿ ರೆಡ್ಡಿ, ಓಬಳೇಶ್, ಶ್ರೀಕಾಂತ್, ಮೇಸ್ತ್ರಿ ಬಸವರಾಜು ತಳವಾರ್ ಓಬಳೇಶ್, ಪಾಂಡು ಜೀವನ್, ವಾಲ್ಮೀಕಿ ಜಗನ್, ಶ್ರೀನಿವಾಸ್ ಬೋಂಡಾ ಬಸಯ್ಯ ಸೂರಿ,ಮುಂತಾದ ವಾಲ್ಮೀಕಿ ಮುಖಂಡರು ಉಪಸ್ಥಿತರಿದ್ದರು.

## ಡಿ. ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಉದ್ಘಾಟನೆ

### ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಹಾಸ್ಟೆಲ್‌ಗಳು ಪ್ರಮುಖ ಪಾತ್ರವಹಿಸುತ್ತವೆ: ಹೆಚ್.ಆರ್.ಗವಿಯಪ್ಪ






● ವಾರ್ತಾಲೋಕ ವಾರ್ತೆ

**ಹೊಸಪೇಟೆ (ವಿಜಯನಗರ) :** ವಿದ್ಯಾರ್ಥಿಗಳಿಗೆ ಕಾಲೇಜು ಶಿಕ್ಷಣಕ್ಕೆ ಮಾತ್ರವಲ್ಲದೆ ವಿವಿಧ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಓದಲು ವಿದ್ಯಾರ್ಥಿನಿಲಯಗಳು ಸಾಕಷ್ಟು ಅನುಕೂಲವಾಗುತ್ತವೆ ಎಂದು ವಿಜಯನಗರ ಶಾಸಕರಾದ ಹೆಚ್.ಆರ್.ಗವಿಯಪ್ಪ ಅವರು ಹೇಳಿದರು.

ಅ.19 ರಂದು ಹೊಸಪೇಟೆಯ ಆರ್.ಟಿ.ಓ ಕಚೇರಿ ಹಿಂಭಾಗದಲ್ಲಿ ನೂತನವಾಗಿ ಮಂಜೂರಾದ ಡಿ. ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಿ. ದೇವರಾಜ ಅರಸು ಅವರು ಹಿಂದುಳಿದ ವರ್ಗಗಳ ಜನರು ಮುಂದೆ ಬರುಲು ಸಾಕಷ್ಟು ಯೋಜನೆ ರೂಪಿಸಿದ್ದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ಸಮುದಾಯಗಳಿಗೆ ಶಕ್ತಿ ತುಂಬುವ ಕೆಲಸ ಮಾಡಿ ಅವರನ್ನು ವಿದ್ಯಾವಂತರನ್ನಾಗಿಸಿ ರಾಜಕೀಯವಾಗಿಯು ಮುಂದೆ ಬರಲು ಹಲವಾರು ಯೋಜನೆ ರೂಪಿಸಿದ್ದರು ಎಂದರು.

ವಿದ್ಯಾರ್ಥಿಗಳು ಸರ್ಕಾರದಿಂದ ಒದಗಿಸುವ ಎಲ್ಲ ಸೌಲಭ್ಯಗಳನ್ನು ಸರಿಯಾಗಿ ಉಪಯೋಗ ಮಾಡಿಕೊಂಡು ತಮ್ಮ ತಂದೆ, ತಾಯಿಯರ ಆಸೆಯನ್ನು ಈಡೇರಿಸಬೇಕು, ವಿದ್ಯಾಭ್ಯಾಸದ ಜೊತೆಗೆ ಉತ್ತಮ ಸಂಸ್ಕಾರ ಕಲಿಬೇಕು. ತಂದೆ, ತಾಯಿ, ಗುರು ಹಿರಿಯರಿಗೆ ಗೌರವ ಕೊಡಬೇಕು ಎಂದು ಶಾಸಕರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಮಾತನಾಡಿ, ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಸಾಧನೆ ಮಾಡಬೇಕಾದರೆ ಅವರಿಗೆ ಮೊದಲು ಮೂಲಭೂತ ಸೌಲಭ್ಯಗಳಿರಬೇಕು. ವಿಜಯನಗರ ಜಿಲ್ಲೆಯನ್ನು ಶೈಕ್ಷಣಿಕವಾಗಿ ಮುಂದೆ ತರಲು ಸಾಕಷ್ಟು ಯೋಜನೆಗಳು ರೂಪಿಸುತ್ತಿದ್ದು ಅದರ ಭಾಗವೇ ಡಿ. ದೇವರಾಜ ಅರಸು ಬಾಲಕಿಯರ ವಿದ್ಯಾರ್ಥಿನಿಲಯ ಆರಂಭ, ಈಗೆ ಜಿಲ್ಲೆಯಲ್ಲಿ ಕಾನೂನು ಪದವಿ ಕಾಲೇಜು ಮತ್ತು ಮೆಡಿಕಲ್ ಕಾಲೇಜು ಸೇರಿದಂತೆ ಉನ್ನತ ಶಿಕ್ಷಣದ ಕಾಲೇಜುಗಳನ್ನು ತೆರೆಯಲು ಯೋಜನೆ ರೂಪಿಸಿದ್ದು, ಈಗಾಗಲೇ ಕಾನೂನು ಪದವಿ ಕಾಲೇಜು ಆರಂಭಕ್ಕೆ ಸ್ಥಳ ನಿಗಧಿಯಾಗಿದೆ. ಉಳಿದ ಕಾಲೇಜುಗಳಿಗೆ ಉತ್ತಮ ಸ್ಥಳಕ್ಕಾಗಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎನ್.ಎಫ್ ಇಮಾಮ್ ನಿಯಾಜಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕೆ.ಬಿ.ರಾಮಚಂದ್ರಪ್ಪ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಅಧಿಕಾರಿಗಳು ಹಾಗೂ ವಸತಿ ನಿಲಯಗಳ ವಾರ್ಡನ್‌ಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕಿತ್ತೂರು ರಾಣಿ ಚೆನ್ನಮ್ಮ ಸರ್ಕಲ್ ಗೆ ಪ.ಪಂ. ಅಧ್ಯಕ್ಷರಿಗೆ ಪಂಚಮಸಾಲಿ ಮುಖಂಡರಿಂದ ಮನವಿ



● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ : ಅ 19.** ತಾಲೂಕಿನ ಪಂಚಮಸಾಲಿ ಮುಖಂಡರಿಂದ ಕಿತ್ತೂರು ರಾಣಿ ಚೆನ್ನಮ್ಮ ಸರ್ಕಲ್ ಗೆ ಪ.ಪಂ.ಅಧ್ಯಕ್ಷರಾದ ಕಾವಲಿ ಶಿವಪ್ಪ ನಾಯಕ,ಇವರಿಗೆ ಮನವಿ ನೀಡಿದರು ಮತ್ತು ಉಪಾಧ್ಯಕ್ಷರಾದ ಲೀಲಾವತಿ ಪ್ರಭಾಕರ್ ಹಾಗೂ ಸ್ಥಾಯಿ ಸಮಿತಿ ಅಧ್ಯಕ್ಷರಾದ ಸೈಯದ್ ಶುಕೂರ್, ಪ ಪಂ. ಸದಸ್ಯರು ಪ.ಪಂ. ಮುಖ್ಯಧಿಕಾರಿಗಳಾದ ಎಂ. ಕೆ. ಮುಗಳಿಯವರಗೆ ಮನವಿ ಮಾಡಿಕೊಂಡರು . ಪಂಚಮಸಾಲಿ ಸಮಾಜದಿಂದ ಇದುವರೆಗೂ ಯಾವುದು ಸರ್ಕಲ್ ಇರುವುದಿಲ್ಲ ಆದ ಕಾರಣ ತಮ್ಮ ಪಟ್ಟಣ ಪಂಚಾಯಿತಿ ವತಿಯಿಂದ ಕೊಟ್ಟೂರು ರಸ್ತೆ ಅಥವಾ ಗುಡೇಕೋಟೆ ರಸ್ತೆಯಲ್ಲಿ ಜಾಗ ಗುರುತಿಸಿ ಪಟ್ಟಣ ಪಂಚಾಯಿತಿ ವತಿಯಿಂದಲೆ ನಾಮಕರಣ ಮಾಡಿ ಉದ್ಘಾಟನೆಯಾಗಬೇಕೆಂದು ಪಂಚಮಸಾಲಿ ಅಧ್ಯಕ್ಷ ಹೊಂಬಾಳೆ ರೇವಣ್ಣ ನೇತೃತ್ವದಲ್ಲಿ ಮನವಿ ಮಾಡಿದರು. ಈ ಸಂಧರ್ಭದಲ್ಲಿ ,ತಾಲೂಕು ಮಹಾಸಭಾಧ್ಯಕ್ಷರಾದ ಸುನೀಲ್ ಗೌಡ,ಮೊರಬ ಶಿವಣ್ಣ,ಎಂ. ಮರ 'ಳುಸಿದ್ದಪ್ಪ,ಚಿನ್ನಪ್ರಾಪ್ಪ,ಖಾನಾವಳಿ ಕೊಟ್ರೇಶ್, ಅಮಲಾಪುರ ಮಂಜುನಾಥ್.ಪಿಗ್ಮಿ ಶಿವಣ್ಣ,ಬ್ಯಾಳಿ ಶಿವಪ್ರಸಾದ್,ಬ್ಯಾಳಿ ವಿಜಯಕುಮಾರ್,ಕಟ್ಟಿ ಬಸಣ್ಣ, ಮೊರಬ ವೀರಭದ್ರಪ್ಪ, ಎಲೆ. ನಾಗರಾಜ್,ಬಣವಿಕಲ್ ಎರ್ರಿಸ್ವಾಮಿ,ಎಂ ಬಸವರಾಜ್,ಇನ್ನು ಇತರರು ಇದ್ದರು .

ವರದಿ ಹೆಚ್ಚು ವೀರಣ್ಣ

## ಕೂಡ್ಲಿಗಿ : ಕೋಡಿಬಿದ್ದ ಕೆರೆಗೆ ಗ್ರಾಮಸ್ಥರಿಂದ ಮದುಗಮ್ಮ ಗಂಗಾಪೂಜೆ

● ವಾರ್ತಾಲೋಕ ವಾರ್ತೆ



**ಕೂಡ್ಲಿಗಿ : ಅ19.** ಕೂಡ್ಲಿಗಿ ತಾಲೂಕಿನಾದ್ಯಂತ ಕಳೆದ ವಾರದಿಂದ ಸುರಿದ ಮಳೆಗೆ ಬಹುತೇಕ ಹಲವಾರು ಗ್ರಾಮಗಳಲ್ಲಿ ಕೆರೆಕಟ್ಟೆಗಳು ಭರ್ತಿಯಾಗಿ ಕೋಡಿಬಿದ್ದು ತುಂಬಿಹರಿಯುತ್ತಿವೆ.

ಅದರಲ್ಲಿ ಕೂಡ್ಲಿಗಿಯ ದೊಡ್ಡಕೆರೆ ಸಹ ಕೋಡಿಬಿದ್ದು ರೈತರ ಮೊಗದಲ್ಲಿ ಸಂತಸ ಮೂಡಿದ್ದು, ಜಾನುವಾರುಗಳಿಗೆ ಈ ವರ್ಷ ನೀರಿನ ಹಾಗೂ ಮೇವಿನ ಕೊರತೆ ನೀಗಿಸಿದೆ. ಸಂಪ್ರದಾಯದಂತೆ ಶುಕ್ರವಾರ ಕೂಡ್ಲಿಗಿ ಪಟ್ಟಣದ ಸಕಲ ದೈವಸ್ಥರು ಸೇರಿ ಕೋಡಿಬಿದ್ದ ಕೆರೆಗೆ ಗಂಗಪೂಜೆ ನೆರವೇರಿಸಿದರು. ಬೆಳಿಗ್ಗೆ 11ಗಂಟೆಗೆ ಗ್ರಾಮ ದೇವತೆ ಶ್ರೀ ಊರಮ್ಮದೇವಿ ದೇವಸ್ಥಾನದಲ್ಲಿ ಮೊದಲು ಪೂಜೆ ನೆರವೇರಿಸಿ ನಂತರ ಗ್ರಾಮಸ್ಥರು ಮಹಿಳೆಯರು ಭಕ್ತಿಭಾವದಿಂದ ವಾದ್ಯಮೇಳಗಳೊಂದಿಗೆ ಕೆರೆಗೆ ತೆರಳಿ ಪೂಜೆ ಸಲ್ಲಿಸಿದರು.

ಕೂಡ್ಲಿಗಿ ಜೋಯಿಸರಾದ ಶ್ರೀ ಹಯವದನ ಆಚಾರ್ ಇವರ ಪೌರೋಹಿತ್ಯದಲ್ಲಿ, ಹಿರೇಮಠದ ಚಿದಾನಂದಸ್ವಾಮಿಯುವರ ಸಾನಿಧ್ಯದಲ್ಲಿ ಚೌಡಪ್ಪ ಪೂಜಾರ್ ಇವರಿಂದ ಪೂಜಾ ವಿಧಿವಿಧಾನಗಳು ಜರುಗಿದವು.

ಈ ಸಂದರ್ಭದಲ್ಲಿ ಕೂಡ್ಲಿಗಿ ಪಟ್ಟಣದ ಯುವಕರು ಮಹಿಳೆಯರು ಮಕ್ಕಳು ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

**ವರದಿ ಎಚ್ ವೀರಣ್ಣ.**

## ಟೆಂಡರ್ ಮಾಡಿಕೊಂಡು ಕೆಲಸದ ಅನುಮತಿ ಪಡೆಯದ ಗುತ್ತಿಗೆದಾರರಿಗೆ ಕಪ್ಪು ಪಟ್ಟಿಗೆ ಸೇರಿಸಿ ಪ.ಪಂ ಅಧ್ಯಕ್ಷ ಕಾವಲಿ ಶಿವಪ್ಪ ನಾಯಕ

● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ: ಅ 19.** ಟೆಂಡರ್ ಮಾಡಿಕೊಂಡು ಕೆಲಸದ ಅನುಮತಿ ಪಡೆಯದ ಗುತ್ತಿಗೆದಾರರಿಗೆ ನೋಟೀಸ್ ನೀಡಿ, ಕಪ್ಪು ಪಟ್ಟಿಗೆ ಸೇರಿಸಿ ಎಂದು ಪಟ್ಟಣ ಪಂಚಾಯ್ತಿ ಅಧ್ಯಕ್ಷ ಕಾವಲ್ಲಿ ಶಿವಪ್ಪ ನಾಯಕ ಪಟ್ಟಣ ಪಂಚಾಯ್ತಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣ ಪಂಚಾಯ್ತಿ ಸಭಾಂಗಣದಲ್ಲಿ ಶನಿವಾರ ನಡೆದ ಸಭೆಯ ಆಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಟ್ಟಣದಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಅನೇಕ ಯೋಜನೆಗಳ ಮೂಲಕ ಟೆಂಡರ್ ಕರೆಯಲಾಗಿದೆ. ಆದರೆ ಕಾಮಗಾರಿಗಳು ನಡೆಯದೆ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಈ ಬಗ್ಗೆ ಜನರಿಗೆ ಉತ್ತರ ಹೇಳುವುದು ಕಷ್ಟವಾಗಿದೆ ಎಂದು ಅವರು ಅಸದಾನ ವ್ಯಕ್ತಪಡಿಸಿದರು.

ಇದಕ್ಕೆ ಸದಸ್ಯರಾದ ತಳಾಸ್ ವೆಂಕಟೇಶ್, ರೇಣುಕಾಶ್ರೀ, ಬಸು ನಾಯ್ಕ್, ಚಿರಿಬಿ ಮಂಜುನಾಥ, ಸಚಿನ್ ಕುಮಾರ್ ಸೇರಿದಂತೆ ಸಭೆಯಲ್ಲಿದ್ದ ಬಹುತೇಕ ಸದಸ್ಯರು ಧ್ವನಿಗೂಡಿಸಿದರು.

ಈ ವೇಳೆ ಕಿರಿಯ ಎಂಜನಿಯರ್ ಗಿರೀಶ್ ಮಾತನಾಡಿ, ಕೆಲವು ಟೆಂಡರುಗಳಿಗೆ ಈ ಹಿಂದೆ ಇದ್ದ ಮುಖ್ಯಾಧಿಕಾರಿ ಲಾಗೀನ್ ನೀಡಬೇಕಾಗಿದೆ. ಈಗಾಗಾಲೇ ಕಾಮಗಾರಿಗಳ ಕಾರ್ಯಾದೇಶ ನೀಡಿರುವ ಗುತ್ತಿಗೆದಾರರಿಗೆ ಕಾಮಗಾರಿ ಆರಂಭ ಮಾಡಲು ಸೂಚಿಸಲಾಗುವುದು ಎಂದು ಹೇಳಿದರು.



ಮನೆ ನಿರ್ಮಾಣ ಮಾಡಿಕೊಂಡವರಿಗೆ ವಿದ್ಯುತ್ ಸಂಪರ್ಕ ಪಡೆದುಕೊಳ್ಳಲು ನಿರಾಪೇಕ್ಷಣಾ ಪತ್ರ ನೀಡದಿರುವ ಬಗ್ಗೆ ಸದಸ್ಯರು ಸಭೆಯಲ್ಲಿ ಪ್ರಾಸ್ತಾಪಿಸಿದರು.

ಇದಕ್ಕೆ ಮುಖ್ಯಾಧಿಕಾರಿ ಎಂ.ಕೆ. ಮುಗಳಿ ಉತ್ತರಿಸಿ ಸರ್ಕಾರದ ನಿಯಮಗಳಂತಯೇ ಮನೆ ದಾಖಲೆಗಳನ್ನು ಪಡೆದು ನಿರಾಪೇಕ್ಷಣಾ ಪತ್ರ ನೀಡಲಾಗುತ್ತಿದೆ ಎಂದರು.

ಪಟ್ಟಣದಲ್ಲಿ ಅನೇಕ ವರ್ಷಗಳ ಹಿಂದೆಯೇ ಮನೆಗಳನ್ನು ನಿರ್ಮಾಣ ಮಾಡಿಕೊಂಡಿದ್ದಾರೆ. ಅಂತವರಲ್ಲಿ ನೀವು ಕೇಳಿದ ದಾಖಲೆಗಳು ಲಭ್ಯವಾಗುವುದಿಲ್ಲ. ಅದ್ದರಿಂದ ಮನೆ ಕಂದಾಯ ಕಟ್ಟಿದ ಅದಾರದ ಮೇಲೆಯೇ ನಿರಾಪೇಕ್ಷಣಾ ಪತ್ರ ನೀಡಬೇಕು. ಬಾಕಿ ಉಳಿಸಿಕೊಂಡಿರುವ ಎಲ್ಲವನ್ನು ಇಂದೇ ವಿಲೇವಾರಿ ಮಾಡಿ ಎಂದು ಅಧ್ಯಕ್ಷ ಕಾವಲ್ಲಿ ಶಿವಪ್ಪ ನಾಯಕ ಅಧಿಕಾರಿಗಳಿಗೆ ಹೇಳಿದರು.

ದಸರಾ ಹಬ್ಬದ ಸಮಯದಲ್ಲಿ ಮಳೆ ಬಂದು ಪಟ್ಟಣದ ಅನೇಕ ಮನೆಗಳಿಗೆ ನೀರು ನುಗ್ಗಿತ್ತು. ಆದರೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಪೋನ್ ತೆಗೆಯಲಿಲ್ಲ. ಈಗಾದರೆ ನಾವು ಯಾರಿಗೆ ಹೇಳಬೇಕು ಎಂದು ಅಧ್ಯಕ್ಷರು. ಸ್ಥಾಯಿ ಸಮಿತಿ ಅಧ್ಯಕ್ಷರು ಸೇರಿದಂತೆ ಸದಸ್ಯರೆಲ್ಲ ಮುಖ್ಯಾಧಿಕಾರಿಯನ್ನು ಪ್ರಶ್ನಿಸಿದರು.

ಇದಕ್ಕೆ ಉತ್ತರಿಸಿದ ಮುಖ್ಯಾಧಿಕಾರಿ ಎಂ.ಕೆ. ಮುಗಳಿ, ಹಬ್ಬದ ದಿನ ಅನಿರೀಕ್ಷಿತವಾಗಿ ಮಳೆ ಬಂದಿತ್ತು. ಇದರಿಂದ ಕೆಲ ಸಿಬ್ಬಂದಿಯನ್ನು ನಿಯೋಜಿಸಿ ಕೆಲಸ ಮಾಡಿಸಲಾಯಿತು. ಮುಂದೆ ಈ ರೀತಿಯಾಗದಂತೆ ನೋಡಿಕೊಳ್ಳಲಾಗುವುದು ಎಂದರು.


ಪ್ರತಿ ಮನೆಗೂ ನೀರು ನೀಡುವುದು ಕಡ್ಡಾಯ, ಅದ್ದರಿಂದ ಶೀಘ್ರದಲ್ಲಿಯೇ ಪಾವಗಡ ಯೋಜನೆಯಿಂದ ಕೂಡ್ಲಿಗಿ ಪಟ್ಟಣಕ್ಕೆ ನೀರು ಪೂರೈಸುವ ಕಾಮಗಾರಿ ಆರಂಭ ಮಾಡಲಾಗುವುದು. ಇದಕ್ಕಾಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು. ವಾಸವಿರುವ ಯಾವ ಮನೆಯನ್ನು ಇದರಿಂದ ಹೊರ ಇಡುವಂತಿಲ್ಲ. ಅದ್ದರಿಂದ ಇದಕ್ಕೆ ಎಲ್ಲರು ಸಹಕಾರ ನೀಡಬೇಕು ಎಂದು ಮತ್ತು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಎಇಇ ಮಲ್ಲಿಕಾರ್ಜುನ ಪಾಟೀಲ್ ಹೇಳಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ಶುಕೂರ್, ಸದಸ್ಯರಾದ ಬಸು ನಾಯ್ಕ್, ಡಾಣಿ ಚೌಡಮ್ಮ, ಸರಸ್ವತಿ ರಾಘವೇಂದ್ರ, ಸರಸ್ವತಿ ರಮೇಶ್, ಊರಮ್ಮ, ಸಹಯಕ ಎಂಜನಿಯರ್ ರಾಮಚಂದ್ರ ಗೊಲ್ಲರ್, ಕಂದಾಯ ನಿರೀಕ್ಷಕ ರಾಘವೇಂದ್ರ ಹಾಗು ಸಿಬ್ಬಂದಿ ಪಾಲ್ಗೊಂಡಿದ್ದರು.

ವರದಿ ಎಚ್ ವೀರಣ್ಣ.

# ಅ.21 ರಿಂದ ನ.20 ರವರೆಗೆ 6ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮ

● ವಾರ್ತಾಲೋಕ ವಾರ್ತೆ



**ಹೊಸಪೇಟೆ (ವಿಜಯನಗರ)**: ಕೇಂದ್ರ ಸರ್ಕಾರದ 2024-25 ನೇ ಸಾಲಿನ "ಕಾಲು ಬಾಯಿ ಜ್ವರ ರೋಗ" ತಡೆಗೆ ಜಾನುವಾರು ಆರೋಗ್ಯ ಮತ್ತು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 6ನೇ ಸುತ್ತಿನ ಕಾಲುಬಾಯಿ ಜ್ವರ ರೋಗದ ವಿರುದ್ಧ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ಗ್ರಾಮ, ಪಟ್ಟಣ ಮತ್ತು ನಗರಗಳಲ್ಲಿ ರೈತರ ಮತ್ತು ಸಾರ್ವಜನಿಕರ ಮನೆ ಬಾಗಿಲಿಗೆ ತೆರಳಿ ಅಕ್ಟೋಬರ್ 21 ರಿಂದ ನವೆಂಬರ್ 20 ರ ವರೆಗೆ ನಿರಂತರವಾಗಿ ಹಾಕಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವಾಕರ್ ಎಂ.ಎಸ್ ತಿಳಿಸಿದರು.

ಅವರು ಅಕ್ಟೋಬರ್ 18 ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಅವರ ಅಧ್ಯಕ್ಷತೆಯಲ್ಲಿ ನಡೆದ 6ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮ ಪೂರ್ವಬಾವಿ ಸಭೆಯಲ್ಲಿ ಮಾತನಾಡಿದರು. ಜಾನುವಾರುಗಳಲ್ಲಿ ಕಾಲು ಬಾಯಿ ಜ್ವರವು ಎಲ್ಲಾ ಸೀಳು ಗೊರಸುಳ್ಳ ಪ್ರಾಣಿಗಳಲ್ಲಿ ವೈರಾಣುವಿನಿಂದ ಬರುವ ಖಾಯಿಲೆಯಾಗಿದ್ದು ಈ ರೋಗವು ಸಾಂಕ್ರಾಮಿಕ ರೋಗವಾಗಿದ್ದು ಗಾಳಿ ಮೂಲಕ ಹರಡುತ್ತದೆ. ಈ ರೋಗದಿಂದ ದನ ಹಾಗೂ ಎಮ್ಮೆಗಳಲ್ಲಿ ಕಾಲು ಮತ್ತು ಬಾಯಿಗಳಲ್ಲಿ ಗಾಯವಾಗಿ ಅಪಾರವಾಗಿ ಬಳಲುವಿಕೆ, ನಿಶ್ಯಕ್ತಿ, ಕಡಿಮೆ ಹಾಲಿನ ಇಳುವರಿ ಮೂಲಕ ರೈತರ ಆರ್ಥಿಕ ಹಾನಿಗೆ ಕಾರಣವಾಗುತ್ತದೆ.

ಇದರ ವಿರುದ್ಧವಾಗಿ ಈಗಾಗಲೇ 2024 ರ ಏಪ್ರಿಲ್ ನಲ್ಲಿ 5ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸುಮಾರು 2,79,000 ಜಾನುವಾರುಗಳಿಗೆ ಕಾಲು ಬಾಯಿ ಲಸಿಕೆ ಹಾಕಲಾಗಿರುತ್ತದೆ.

ಈಗ 6ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಜಿಲ್ಲೆಯಲ್ಲಿನ 2,84,000 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ನಿಗಧಿಯಾಗಿದ್ದು ಈಗಾಗಲೇ ಸರ್ಕಾರದಿಂದ ಲಸಿಕೆ ಸ್ವೀಕರಿಸಲಾಗಿರುತ್ತದೆ. ಈ ಲಸಿಕಾ ಕಾರ್ಯಕ್ರಮವು ಜಿಲ್ಲೆಯ ಎಲ್ಲಾ 91 ಇಲಾಖಾ ಸಂಸ್ಥೆಗಳಲ್ಲಿ ಏಕ ಕಾಲದಲ್ಲಿ ಪ್ರಾರಂಭವಾಗಲಿದ್ದು 45 ಪಶುವೈದ್ಯಾಧಿಕಾರಿಗಳು ಮತ್ತು 9 ಗುತ್ತಿಗೆ ಆಧಾರಿತ ಪಶುವೈದ್ಯಾಧಿಕಾರಿಗಳು, 159 ಇಲಾಖಾ ಸಿಬ್ಬಂದಿಯೊಂದಿಗೆ 83 ಜನ ಹೊರಗುತ್ತಿಗೆ ಹಾಗೂ ಮೈತ್ರಿ ಕಾರ್ಯಕರ್ತರು ಸೇರಿದಂತೆ ಒಟ್ಟು 242 ಲಸಿಕೆದಾರರು ಲಸಿಕೆ ಹಾಕುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಲಸಿಕೆ ಸಂಗ್ರಹಣೆ ಮಾಡಿಕೊಳ್ಳಲಾಗಿದ್ದು ಲಸಿಕೆ ಶೀತಲ ಸರಪಳಿಗೆ ಯಾವುದೇ ತೊಂದರೆ ಇರುವುದಿಲ್ಲ. ಆಯಾ ತಾಲ್ಲೂಕಿನ ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಇವರು ಸಾರ್ವಜನಿಕರಿಗೆ ಕಾರ್ಯಕ್ರಮದ ಪ್ರಚಾರವನ್ನು ಬ್ಯಾನರ್, ಪೋಸ್ಟರ್‌ಗಳ ಮೂಲಕ ಪ್ರಚಾರ ಜಾರಿಯಲ್ಲಿರುತ್ತದೆ. ಸದರಿ ಲಸಿಕಾ ಕಾರ್ಯಕ್ರಮವು ಇಲಾಖೆ ಮತ್ತು ಕರ್ನಾಟಕ ಹಾಲು ಒಕ್ಕೂಟ (ಕೆಎಂಎಫ್) ಬಳ್ಳಾರಿ, ವಿಜಯನಗರ ಇವರ ಸಹಯೋಗದಲ್ಲಿ ನಡೆಯಲಿದ್ದು ರೈತರು ಹಾಗೂ ಸಾರ್ವಜನಿಕರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳುವಲ್ಲಿ ಸಹಕರಿಸಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಪುರಾಣ ಮಂಗಲೋತ್ಸವ



**ಮುನವಳ್ಳಿ,** : ಪಟ್ಟಣದ ಅಂಬಾ ಭವಾನಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವ ಅಂಗವಾಗಿ ಪುರಾಣ ಮಂಗಲೋತ್ಸವ ಸಮಾರಂಭ ಜರುಗಿತು.

ಸವದತ್ತಿ ಎಪಿ.ಎಮ್.ಸಿ ಅಧ್ಯಕ್ಷ ಚಂದ್ರು ಜಂಬ್ರಿ ಮುಖ್ಯಅತಿಥಿಗಳಾಗಿ ಮಾತನಾಡಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಇಂತಹ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು. ಪ್ರತಿಯೊಬ್ಬರ ಜೀವನದಲ್ಲಿ ಸಂಸ್ಕಾರ ಅತ್ಯಂತ ಮುಖ್ಯ ಬಾಲ್ಯದಲ್ಲಿಯೆ ಗುರುಹಿರಿಯರು ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡಬೇಕೆಂದರು. ದುರ್ಗುಣಗಳೆಂಬ ರಾಕ್ಷಸರನ್ನು ಸಂಹರಿಸಬೇಕು ಸನ್ಮಾರ್ಗದಲ್ಲಿ ನಡೆದು ದೇವಿ ಅನುಗ್ರಹಕ್ಕೆ ಪಾತ್ರರಾಗಬೇಕೆಂದರು.

ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು ದಿವ್ಯಸಾನಿದ್ಯ ವಹಿಸಿ ಆಶಿರ್ವಚನ ನೀಡಿದರು.

ಮಕ್ಕಳು ನವದುರ್ಗೆಯರ ವೇಷಭೂಷಣದಲ್ಲಿ ಕಂಗೊಳಿಸಿದರು, ರಂಗೋಲಿ ಸ್ಪರ್ಧೆ ಹಾಗೂ ವಿವಿಧ ಕಾರ್ಯಕ್ರಮಗಳಲ್ಲಿ ಬಾಗವಹಿಸಿ ಬಹುಮಾನ ಪಡೆದುಕೊಂಡರು.

ಸೋಮಶೇಖರ ಯಲಿಗಾರ ಅಧ್ಯಕ್ಷತೆ ವಹಿಸಿದ್ದರು, ಪ್ರವಚನಕಾರರಾದ ಸಂಗಯ್ಯ ಹಿರೇಮಠ, ಶ್ರೀನಿವಾಸ ಕುಲಕರ್ಣಿ, ಟಿ.ಎನ್.ಮುರಂಕರ, ರಾಧಾ ಕುಲಕರ್ಣಿ, ಬಸು ಶಿವಪೇಟಿ, ಬಸವರಾಜ ಪವಾರ, ಸೋಮು ಮುರಗೋಡ, ರಾಮು ಪವಾರ, ಫಕೀರಪ್ಪ ಮುರಗೋಡ, ಶಿವು ಜಾಧವ, ಸತೀಶ ಕದಂ, ವಿಜಯ ಕದಂ, ಆನಂದ ಪವಾರ, ರಾಜು ಸಂಬಾಳಮಠ, ರಾಜು ಕಿಲ್ಲೇದಾರ, ಎಂ.ಎಂ. ಮುರನಾಳ, ಅಂಬಾಭವಾನಿ ಸದ್ಭಕ್ತ ಮಂಡಳಿ, ಶಿವಾಜಿ ಯುವಕ ಮಂಡಳದ ಸದಸ್ಯರು ಉಪಸ್ಥಿತರಿದ್ದರು. ಮಹಾಪ್ರಸಾದದೊಂದಿಗೆ ಕಾರ್ಯಕ್ರಮ ಮಂಗಳವಾಯಿತು.

ಶಿಕ್ಷಕ ಬಿ.ಬಿ.ಹುಲಿಗೊಪ್ಪ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಟಿ.ಎನ್.ಮುರಂಕರ

# ಕಿತ್ತೂರು ರಾಣಿ ಚನ್ನಮ್ಮ ಜಯಂತ್ಯುತ್ಸವ ಅಕ್ಟೋಬರ್ 23ಕ್ಕೆ

● ವಾರ್ತಾಲೋಕ ವಾರ್ತೆ

**ಹೊಸಪೇಟೆ (ವಿಜಯನಗರ) ಅಕ್ಟೋಬರ್ 19 (ಕ.ವಾ):** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಹೊಸಪೇಟೆ ಇವರ ಸಂಯುಕ್ತಾಶ್ರಯದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಅಕ್ಟೋಬರ್ 23 ರಂದು ಬೆಳಗ್ಗೆ 11 ಗಂಟೆಗೆ ಹೊಸಪೇಟೆಯ ಕೊಟ್ಟೂರುಸ್ವಾಮಿ ಮಠದಲ್ಲಿ ಹಮ್ಮಿಕೊಳ್ಳಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳ ಉಸ್ತುವಾರಿ ಸಚಿವರಾದ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ಉದ್ಘಾಟಿಸುವರು. ವಿಜಯನಗರ ಶಾಸಕರಾದ ಹೆಚ್.ಆರ್. ಗವಿಯಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕಾರಾಂ ಹಾಗೂ ಡಾ.ಪ್ರಭಾ ಮಲ್ಲಿಕಾರ್ಜುನ, ಶಾಸಕರಾದ ಕೆ.ನೇಮಿರಾಜ ನಾಯ್ಕ, ಡಾ.ಎನ್.ಟಿ.ಶ್ರೀನಿವಾಸ್, ಎಲ್. ಕೃಷ್ಣನಾಯಕ, ಎಂ.ಪಿ.ಲತಾ ಮಲ್ಲಿಕಾರ್ಜುನ ಹಾಗೂ ಬಿ.ದೇವೇಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಬಿ.ಪಾಟೀಲ್, ಶಶೀಲ್ ಜಿ. ನಮೋಶಿ ಹಾಗೂ ವೈ.ಎಂ. ಸತೀಶ್, ಹೊಸಪೇಟೆ ನಗರಸಭೆ ಅಧ್ಯಕ್ಷರಾದ ರೂಪೇಶ್ ಕುಮಾರ ಎನ್., ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎನ್.ಎಫ್ ಇಮಾಮ್ ನಿಯಾಜಿ, ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೋಂಗ್ಜಾಯ್ ಮೋಹಮ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು ಬಿ.ಎಲ್ ಉಪಸ್ಥಿತರಿರುವರು.

ವಿಜಯನಗರ ಮಹಾವಿದ್ಯಾಲಂಯದ ಇತಿಹಾಸ ಉಪನ್ಯಾಸಕರಾದ ಬಸವರಾಜ ಮೇಟಿ ಅವರು ವಿಶೇಷ ಉಪನ್ಯಾಸ ನೀಡುವರು. ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರದ ಮೆರವಣಿಗೆಯು ಬೆಳಿಗ್ಗ 9 ಗಂಟೆಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರೌಢಶಾಲೆಯಿಂದ ಜಂಬುನಾಥ ರಸ್ತೆ, ಬಳ್ಳಾರಿ ರಸ್ತೆ ಮೂಲಕ, ವಡಕರಾಯ ದೇವಸ್ಥಾನ ವೃತ್ತದಿಂದ ಶ್ರೀ ಕೊಟ್ಟೂರುಸ್ವಾಮಿ ಮಠದವರೆಗೆ ವಿವಿಧ ಕಲಾತಂಡದವರಿಂದ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಬಿಜೆಪಿ ಸದಸ್ಯತ್ವ ಅಭಿಯಾನ



**ಹುಬ್ಬಳ್ಳಿ** : ತಾಲೂಕು ಹೆಬಸೂರ ಗ್ರಾಮದ ಅಂಬೇಡ್ಕರ್ ನಗರದಲ್ಲಿರುವ ಅಂಬೇಡ್ಕರ್ ಭವನದಲ್ಲಿ ಭಾರತೀಯ ಜನತಾ ಪಕ್ಷದ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷರಾದ ದೇವರಾಜ ಬಸವರಾಜ. ದಾಡಿಬಾವಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿಜಿ ರವರ ಕನಸು ಸಾಕಾರಗೊಳ್ಳುತ್ತಿದ್ದು ದೇಶದಲ್ಲಿ ಅತಿ ದೊಡ್ಡ ಬದಲಾವಣೆ ಕಂಡಿದ್ದು ಸರ್ವರಿಗೂ ಸಮಪಾಲು ಸಮಬಾಳು ನಿಯಮದಡಿ ಎಲ್ಲ ವರ್ಗದವರನ್ನು ಸಮಾನವಾಗಿ ಕಾಣುವ ಏಕೈಕ ದೊಡ್ಡ ಪಕ್ಷ ಭಾರತೀಯ ಜನತಾ ಪಕ್ಷ ಬಿಜೆಪಿ ಸದಸ್ಯತ್ವವನ್ನು ಹೆಚ್ಚು ಹೆಚ್ಚು ಪಡೆಯಲು ಕರೆ ನೀಡಿದರು .

ಸಮಾಜದ ಹಿರಿಯರಾದ ಬಸಪ್ಪ ಕಾಳಿ ಅಧ್ಯಕ್ಷತೆ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಗ್ರಾಪಂ ಸದಸ್ಯರಾದ ಸುರೇಶ ಹಡಪದ, ಮಂಜುನಾಥ ಉಪ್ಪಾರ್, ಸುರೇಶ ಕಾಳಿ, ಹನುಮಂತಪ್ಪ ಕಾಳಿ, ಗ್ರಾಮ ಪಂಚಾಯತ್ ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.

# ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

● ವಾರ್ತಾಲೋಕ ವಾರ್ತೆ

**ಹೊಸಪೇಟೆ (ವಿಜಯನಗರ) ಅಕ್ಟೋಬರ್ 19 (ಕ.ವಾ):** ಪ್ರಸಕ್ತ ಸಾಲಿನ ಪರಿಶಿಷ್ಟ ಜಾತಿ ಉಪ ಯೋಜನೆಯಡಿ ಬಳಕೆಯಾಗದ ಅನುದಾನದಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.

ದೇವದಾಸಿ ಪುನರ್ವಸತಿ ಯೋಜನೆ, ಬಳ್ಳಾರಿ ಜಿಲ್ಲೆಯ, ನಗರ ಪ್ರದೇಶಗಳಿಗೆ 9 ಫಲಾನುಭವಿಗಳಿಗೆ ಘಟಕದ ವೆಚ್ಚ ರೂ.18 (ಲಕ್ಷಗಳಲ್ಲಿ) ಗಳಂತೆ, ಗ್ರಾಮೀಣ ಪ್ರದೇಶಗಳಿಗೆ 30 ಫಲಾನುಭವಿಗಳಿಗೆ ಘಟಕದ ವೆಚ್ಚ ರೂ 52.50 (ಲಕ್ಷಗಳಲ್ಲಿ) ಗಳಂತೆ, ಸಹಾಯಧನವನ್ನು ನೀಡಿ ವಸತಿ ಸೌಲಭ್ಯ ಕಲ್ಪಿಸಲು ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಯು ಈಗಾಗಲೇ ಪ್ರಾರಂಭಗೊಂಡಿದ್ದು, ಅಕ್ಟೋಬರ್ 30 ರವರೆಗೆ ಕಾಲಾವಕಾಶವಿರುತ್ತದೆ.

ದಾಖಲಾತಿಗಳು: ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಆರ್.ಡಿ.ನಂಬರ್ ಹೊಂದಿರಬೇಕು), ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, 4 ಪಾಸ್ ಪೋರ್ಟ್ ಸೈಜ್ ಭಾವಚಿತ್ರಗಳು, ನಿವೇಶನ ಖಾತಾ ಉತ್ತಾರ, ಆಧಾರ್ ಕಾರ್ಡ್ ಪ್ರತಿ, ಚಾಲ್ತಿ ಬ್ಯಾಂಕ್ ಪಾಸ್ ಪುಸ್ತಕ, ಮೊಬೈಲ್ ನಂಬರ್, ಗ್ರಾಮ ಪಂಚಾಯತಿಯ ವತಿಯಿಂದ ವಸತಿ ಸೌಲಭ್ಯ ಪಡೆದಿರುವುದಿಲ್ಲವೆಂಬ ದೃಢೀಕರಣ ಪತ್ರ. ಅರ್ಜಿ ಸಲ್ಲಿಸಲು ಸುಧಾ ಎಂ. ಚಿದ್ರಿ, ಹೊಸಪೇಟೆ 9449640996, ಕುಮಾರಿ ಕಲ್ಪನಾ ಹಗರಿಬೊಮ್ಮನಹಳ್ಳಿ 7259991208, ಪ್ರಜ್ಞಾ ಹರಪನಹಳ್ಳಿ 9886440107, ಹಾಲನಗೌಡರು ಹೂವಿನಹಡಗಲಿ 9844223314, ನಾರಾಯಣ ಗುನ್ನಳ್ಳಿ ಕೂಡ್ಲಿಗಿ ಮತ್ತು ಕೊಟ್ಟೂರು 9448283832 ಗೆ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ



● ವಾರ್ತಾಲೋಕ ವಾರ್ತೆ

**ಹೊಸಪೇಟೆ:** ದಿನಾಂಕ 19.10.2024 ಶನಿವಾರದಂದು ವಿಜಯನಗರ ಜಿಲ್ಲೆಯ ಹೊಸಪೇಟೆಯ ಅಂಜುಮನ್ ಶಾದಿಮಹಲ್ ಸಭಾಂಗಣದಲ್ಲಿ ಅಂಜುಮನ್ ಖಿದ್ಮತೆ ಇಸ್ಲಾಂ ಹೊಸಪೇಟೆ ಇವರ ನೇತೃತ್ವದಲ್ಲಿ ಸಪ್ತಗಿರಿ ಆಸ್ಪತ್ರೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಹೃದಯ ರೋಗ, ನರರೋಗ, ಕ್ಯಾನ್ಸರ್, ಮೂತ್ರಪಿಂಡದ ಕಲ್ಲು ಇತರೆ ಹಲವಾರು ಕಾಯಿಲೆಗಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ಈ ಒಂದು ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ವಾಲ್ಮೀಕಿ ಸಮಾಜದ ಅಧ್ಯಕ್ಷರಾದ ಗುಜ್ಜಲ್ ಶ್ರೀನಾಥ್ ರವರು ಮಾತನಾಡಿ ಈ ರೀತಿ ಒಂದು ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿರುವ ಅಂಜುಮನ್ ಕಮಿಟಿ ಅಧ್ಯಕ್ಷರಿಗೂ ಹಾಗೂ ಎಲ್ಲಾ ಪದಾಧಿಕಾರಿಗಳು ಅಭಿನಂದನೆಗಳನ್ನು ತಿಳಿಸುತ್ತೇನೆ ಎಂದರು. ಕಾರಣ ಈ ರೀತಿ ಒಂದು ಉಚಿತ ತಪಾಸಣಾ ಶಿಬಿರಗಳನ್ನು ಆಯೋಜಿಸುವುದರಿಂದ ಆರ್ಥಿಕವಾಗಿ ಹಿಂದುಳಿದವರಿಗೆ ಯಾವುದೇ ಜಾತಿ ಮತ ಪಂಥ ವಿಲ್ಲದೆ ಎಲ್ಲರೂ ಸದುಪಯೋಗ ಪಡೆದುಕೊಳ್ಳಬಹುದು ಹಾಗೂ ಪರಸ್ಪರ ಸಹಕಾರ, ಹೊಂದಾಣಿಕೆ, ಪ್ರೀತಿ, ವಿಶ್ವಾಸ ಗಳಿಸಲು ಸಾಧ್ಯವಾಗುತ್ತದೆ ಎಂದರು.

ನಂತರ ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಅಂಜುಮನ್ ಕಿದ್ಮತೆ ಇಸ್ಲಾಂ ಸಮಿತಿಯ ಅಧ್ಯಕ್ಷರಾದ ಹೆಚ್. ಎನ್. ಮಹಮ್ಮದ್ ಇಮಾಮ್ ನಿಯಾಜಿ ರವರು ಮಾತನಾಡಿ ಇಂದಿನ ಅತ್ಯಾಧುನಿಕ ಯುಗದಲ್ಲಿ ಕಡು ಬಡತನದಲ್ಲಿರುವ ದಿನಗೂಲಿ ಕಾರ್ಮಿಕರಿಗೂ, ಹಾಗೂ ಹಣದ ಸಂಪಾದನೆಯ ಹಿಂದೆ ಬಿದ್ದಿರುವ ಬಡವರಿಂದ ಹಿಡಿದು ಶ್ರೀಮಂತರ ವರೆಗೂ ಆರೋಗ್ಯದ ಬಗ್ಗೆ ಸ್ವತಹ ಕಾಳಜಿ ವಹಿಸುತ್ತಿರುವುದಿಲ್ಲ. ಆರೋಗ್ಯದ ಮಹತ್ವವನ್ನು ಅರಿಯದೆ ದಿವ್ಯ ನಿರ್ಲಕ್ಷವನ್ನು ಮಾಡುತ್ತಿರುತ್ತಾರೆ. ನಂತರ ಆರೋಗ್ಯ ವನ್ನು ಮರಳಿ ಪಡೆಯಲು ಹಣವನ್ನು ವಿಪರೀತವಾಗಿ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವೇ ಮಹಾಭಾಗ್ಯ ಎನ್ನುವ ನಾಣ್ಣುಡಿಯಂತೆ ಈ ಭಾಗದ ಜನರು ಯಾವುದೇ ತಾರತಮ್ಯ ಭೇದ ಭಾವನೆ ಇಲ್ಲದೆ ಎಲ್ಲರೂ ಸದುಪಯೋಗಪಡಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.

ಈ ಒಂದು ಉಚಿತ ತಪಾಸಣೆ ಶಿಬಿರದಲ್ಲಿ ಕುರುಬ ಸಮಾಜದ ಮುಖಂಡರು ಹಾಗೂ ಮಾಜಿ ಹುಡ ಅಧ್ಯಕ್ಷರಾದ ಆರ್. ಕೊಟ್ರೇಶ್, ಹಾಗೂ ಪರಶುರಾಮ್ ನಾಯಕ ಸಮಾಜದ ಮುಖಂಡರು ವೈದ್ಯಾಧಿಕಾರಿಗಳಾದ ಡಾ|| ಶೋಹನ್, ಡಾ|| ಶರವಣ್ ಎ, ಡಾ|| ಅಭಿಷೇಕ್, ಡಾ|| ಡಾಕ್ಟರ್ ವೆಳ್ಳಿ ರಥನಂ, ಡಾ|| ಜುನೈದ್ ಹಾಗೂ ಅಂಜುಮನ್ ಕಮಿಟಿ ಉಪಾಧ್ಯಕ್ಷರಾದ ಎಮ್.ಎಮ್. ಫೈರೋಜ್ ಖಾನ್, ಕಾರ್ಯದರ್ಶಿಯಾದ ಅಬೂಬಕ್ಕರ್ ಅಶ್ರಫಿ, ಖಜಾಂಚಿಯಾದ ಅನ್ಸರ್ ಭಾಷ, ಜಂಟಿಕಾರ್ಯದರ್ಶಿಯಾದ ಡಾ|| ದುರ್ವೆಶ್ ಮೈನುದ್ದೀನ್, ಸದ್ಯಸರಾದ ಸದ್ದಮ್ ಹುಸೇನ್, ಮೊಹಮ್ಮದ್ ಮೋಸಿನ್, ಗುಲಾಮ್ ರಸೂಲ್, ಹಾಗೂ ಸಮಾಜದ ಹಿರಿಯ ಮುಖಂಡರು ಹಾಗೂ ಹಾಗೂ ಅಂಜುಮನ್ ಆಸ್ಪತ್ರೆಯ ಸಿಬ್ಬಂದಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ತಳವಾರ ಎಸ್.ಟಿ. ಪ್ರಮಾಣಪತ್ರ: ಉಚ್ಚ ನ್ಯಾಯಾಲಯದ ಆದೇಶ ಪಾಲಿಸುವಂತೆ ಆಗ್ರಹಿಸಿ ತಳವಾರ ಮಹಾಸಭಾ ಪ್ರತಿಭಟನೆ



**ವಿಜಯಪುರ** : ತಳವಾರ ಜಾತಿಗೆ ಎಸ್.ಟಿ. ಪ್ರಮಾಣಪತ್ರದ ಬಗ್ಗೆ ಉಚ್ಚ ನ್ಯಾಯಾಲಯದ ಆದೇಶ ಪಾಲಿಸುವಂತೆ ಆಗ್ರಹಿಸಿ ವಿಜಯಪುರ ಜಿಲ್ಲಾ ತಳವಾರ ಮಹಾಸಭಾ ಸಮಿತಿ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ಸಂವಿಧಾನದ ತಿದ್ದುಪಡಿ ಪ್ರಕಾರ 'ತಳವಾರ' ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲಾಗಿದೆ. ಕರ್ನಾಟಕ ಸರಕಾರ ಹಿಂದುಳಿದ ವರ್ಗಗಳ ಪಟ್ಟಿಯ (ಕ್ರಮ ಸಂಖ್ಯೆ ) 88 ಎಚ್ ನಲ್ಲಿ ಬರುವ ' ತಳವಾರ ' ಜಾತಿಯನ್ನು ತೆಗೆದು ಹಾಕಿ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರಿಸಿರುತ್ತಾರೆ. ಈ ಮಧ್ಯೆ ವಾಲ್ಮೀಕಿ, ನಾಯಕ ಜನಾಂಗಕ್ಕೆ ಸೇರಿದವರು ಸರಕಾರದ ವಿರುದ್ಧ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿರುತ್ತಾರೆ. ಮಧ್ಯಂತರ ಆದೇಶದಲ್ಲಿ 'ತಳವಾರ' ಜಾತಿಗೆ ಎಸ್.ಟಿ ಪ್ರಮಾಣಪತ್ರ ಕೊಡಬಹುದೆಂದು ಕೋರ್ಟ್ ಅಭಿಪ್ರಾಯಪಟ್ಟಿರುತ್ತದೆ. ಆದರೂ 'ತಳವಾರ' ಎಂಬ ಒಂದೇ ಜಾತಿಯನ್ನು ಎರಡು , ಮೂರು 'ತಳವಾರ,' ಎಂದು ದಾಖಲಾತಿಗಳಿಲ್ಲದೆ ಅನಗತ್ಯ ಗೊಂದಲ ಸೃಷ್ಟಿಸಿ , ಸುಳ್ಳು ಅಪಾದನೆ ಸರಕಾರ ಮತ್ತು ಸರ್ಕಾರದ ಅಧಿಕಾರಿಗಳ ವಿರುದ್ಧ ಮಾಡುತ್ತಿದ್ದಾರೆ. ಅಧಿಕಾರಿಗಳ ಮೇಲೆ ಒತ್ತಡ ತರುತ್ತಿದ್ದಾರೆ. ಇದು ಸರಿಯಲ್ಲ ಎಂದು ಪ್ರತಿಭಟನೆ ನಿರತ ತಳವಾರ ಮುಖಂಡರು ಹೇಳಿದರು.

'ತಳವಾರ' ಜಾತಿ ಭಾರತ ಸಂವಿಧಾನದ ಅಡಿಯಲ್ಲಿ ಸಂಸತ್ತಿನ ಅನುಮೋದನೆಗಾಗಿ ರಾಷ್ಟ್ರಪತಿಗಳ ಅಂಕಿತದ ಮುಖಾಂತರ ಭಾರತ ಸರಕಾರದ ಗೆಜೆಟ್‌ನಲ್ಲಿ ಪ್ರಕಟಿಸಿದೆ. ಮುಂದುವರೆದು

ಕರ್ನಾಟಕ ಸರಕಾರವು ಗೆಜೆಟ್ ಸುತ್ತೋಲೆ ಕೂಡ ಹೊರಡಿಸಿರುತ್ತದೆ . ಅದರ ಪ್ರಕಾರ, ಅಧಿಕಾರಿಗಳು ಪರಿಶೀಲಿಸಿ ದಾಖಲಾತಿಗಳನ್ನು ತೆಗೆದುಕೊಂಡು ಸ್ಥಾನಿಕ ಚೌಕಾಶಿ ಮಾಡಿ , ' ತಳವಾರ ' ಜಾತಿಗೆ ಎಸ್.ಟಿ . ಸರ್ಟಿಫಿಕೇಟ್ ಕೊಡುತ್ತಿದ್ದಾರೆ ಎಂದು ಮುಖಂಡರು ತಿಳಿಸಿದರು.

ಉಚ್ಚ ನ್ಯಾಯಾಲಯದಲ್ಲಿ ದಾವೆ ಇರುವುದರಿಂದ ಸಂವಿಧಾನ ಬದ್ಧವಾಗಿ , ಕಾನೂನು ಅಡಿಯಲ್ಲಿ 'ತಳವಾರ' ಜಾತಿ ಎಸ್.ಟಿ , ಪಟ್ಟಿಗೆ ಸೇರಿರುವುದರಿಂದ ಸರಕಾರ ಒಂದೇ ಸಮುದಾಯದ ಒತ್ತಾಯದ ಮೇರೆಗೆ , 'ತಳವಾರ' ಜಾತಿಗೆ ಯಾವುದೇ ವ್ಯತಿರಿಕ್ತ ಪರಿಣಾಮ ಬೀಳುವಂತಹ ನಿರ್ಣಯ, ನಿರ್ಧಾರಗಳನ್ನು ತೆಗೆದುಕೊಳ್ಳಬಾರದೆಂದು ಮನವಿ ಮಾಡಿಕೊಂಡರು.

ಈ ಸಮಯದಲ್ಲಿ ಮಾಜಿ ಶಾಸಕ ಶರಣಪ್ಪ ಸುಣಗಾರ, ಅಧ್ಯಕ್ಷ ಪ್ರಕಾಶ ಸೊನ್ನದ, ಉಪಾಧ್ಯಕ್ಷ ಅನೀಲಕುಮಾರ ಜಮಾದಾರ, ಪ್ರಧಾನ ಕಾರ್ಯದರ್ಶಿ ಸಾಹೇಬಗೌಡ ಬಿರಾದಾರ ಹಾಗೂ ಸಮಾಜದ ಇತರ ಮುಖಂಡರು ಸೇರಿದಂತೆ ನೂರಾರು ಮಂದಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಅ. 21ರಿಂದ ಕಾಲುಬಾಯಿ ರೋಗ ಲಸಿಕೆ ಅಭಿಯಾನ

● ವಾರ್ತಾಲೋಕ ವಾರ್ತೆ

**ಹೊಸಪೇಟೆ** :ಅ19 ವಿಜಯನಗರ: ಕರ್ನಾಟಕ ಸರ್ಕಾರ ಹಾಗೂಜಿಲ್ಲಾ ಪಂಚಾಯತ್,ವಿಜಯನಗರ ಜಿಲ್ಲೆ ತಾಲ್ಲೂಕು ಪಂಚಾಯತ್, ಹೊಸಪೇಟೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಪಶುಆಸ್ಪತ್ರೆ, ಹೊಸಪೇಟೆ,

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ (ಎನ್.ಎ.ಡಿ.ಸಿ.ಪಿ) ಯೋಜನೆಯಡಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯು ಜಿಲ್ಲೆಯಾದ್ಯಂತ ಆರನೇ ಸುತ್ತಿನ ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮವನ್ನು ಅ. 21ರಿಂದ ನ. 20ರವರೆಗೆ ಹಮ್ಮಿಕೊಂಡಿದೆ. ಕಾಲುಬಾಯಿ ರೋಗವನ್ನು ತಡೆಗಟ್ಟಲು ಜಾನುವಾರುಗಳಿಗೆ ಲಸಿಕೆ ಹಾಕಿಸುವುದು ಕಡ್ಡಾಯವಾಗಿದೆ. ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಸಹಯೋಗದಲ್ಲಿ ಜಾನುವಾರುಗಳಲ್ಲಿ ಕಂಡುಬರುವ ಕಾಲುಬಾಯಿ ರೋಗದ ವಿರುದ್ಧ ಲಸಿಕಾ ಕಾರ್ಯಕ್ರಮವನ್ನು 30 ದಿನ ನಡೆಸಲಾಗುತ್ತಿದೆ.

ಜಿಲ್ಲೆಯಾದ್ಯಂತ ಒಟ್ಟು (ದನಗಳು ಮತ್ತು ಎಮ್ಮೆಗಳು) ಜಾನುವಾರುಗಳಿಗೆ ಉಚಿತ ಲಸಿಕೆ ಹಾಕಲಾಗುತ್ತದೆ. ಅದಕ್ಕಾಗಿ, ಜಿಲ್ಲೆಯಲ್ಲಿ ಸಿಬ್ಬಂದಿಗಳಿದ್ದಾರೆ (ಇಲಾಖೆ ಮತ್ತು ಬಮೂಲ್ ಸೇರಿ). ಲಸಿಕೆದಾರರು ನಿಗದಿತ ದಿನಾಂಕಗಳಂದು ಜಿಲ್ಲೆಯ ಪ್ರತಿ ಹಳ್ಳಿಗಳಿಗೆ ಭೇಟಿ ನೀಡಿ ಉಚಿತವಾಗಿ ಕಾಲುಬಾಯಿ ರೋಗದ ವಿರುದ್ಧ ರಾಸುಗಳಿಗೆ ಲಸಿಕೆ ಹಾಕಲಿದ್ದಾರೆ.

ಈಗಾಗಲೇ ರೋಗ ಲಸಿಕಾ ಅಭಿಯಾನದ ಭಿತ್ತಿಪತ್ರಗಳು (ಪಾಂಪ್ಲೆಟ್ಸ್) ಹಾಗೂ ಕರಪತ್ರಗಳನ್ನು (ಪೋಸ್ಟರ್) ಹಂಚುವುದರ ಮೂಲಕ ಅಭಿಯಾನದ ಪ್ರಚಾರ ಕೈಗೊಳ್ಳಲಾಗಿದೆ. ಜಿಲ್ಲೆಯ ರೈತರು ಮತ್ತು ಹೈನುಗಾರರು ಅಭಿಯಾನದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರು ಮತ್ತು ಮುಖ್ಯ ಪಶು ವೈದ್ಯ ಅಧಿಕಾರಿಗಳು ಆಡಳಿತ ಅಧಿಕಾರಿ ಹೊಸಪೇಟೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರ್ರಾಷ್ಟ್ರೀಯ ಹೆಣ್ಣುಮಕ್ಕಳ ದಿನಾಚರಣೆ



**ನವಲಗುಂದ** ; ಇಂದಿನ ದಿನಮಾನಗಳಲ್ಲಿ ಸಮಾಜದ ಎಲ್ಲ ಕ್ಷೇತ್ರದಲ್ಲೂ ಮಹಿಳೆ ಉತ್ತಮ ಸಾಧನೆ ಮಾಡುತ್ತಿದ್ದಾರೆ. ದೇಶದ ಅತ್ಯುತ್ತಮ ಹುದ್ದೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಮಹಿಳೆಯರ ಶಿಕ್ಷಣಕ್ಕೆ ನಮ್ಮ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಶಾಸಕ ಎನ್ ಎಚ್ ಕೋನರಡ್ಡಿ ಹೇಳಿದರು.


ಅವರು ಪಟ್ಟಣದ

ಗವಿಮಠ ದಾಸೋಹ ಭವನದಲ್ಲಿ ತಾಲ್ಲೂಕಾ ಆಡಳಿತ, ತಾಲ್ಲೂಕು ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶುಅಭಿವೃದ್ಧಿ ಯೋಜನೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಂತರರಾಷ್ಟೀಯ ಹೆಣ್ಣುಮಕ್ಕಳ ದಿನಾಚರಣೆ ಹಾಗೂ ಮಗಳನ್ನು ಉಳಿಸಿ ಮಗಳನ್ನು ಓದಿಸಿ ಜಾಗೃತಿ ಕಾರ್ಯಕ್ರಮವನ್ನು ಶ್ರೀಗಳೊಂದಿಗೆ ಉದ್ಘಾಟಿಸಿ ಮಾತನಾಡಿದರು.

ಸಾನಿಧ್ಯವಹಿಸಿದ್ದ ಗವಿಮಠದ ಬಸವಲಿಂಗಸ್ವಾಮೀಜಿ ಮಾತನಾಡಿ ಮಹಿಳೆಯರು ಯಶಸ್ಸಿನ ಹಾದಿಯಲ್ಲಿ ಸಾಗಬೇಕು. ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಿ ಗುರಿ ಮುಟ್ಟುವ ತನಕ ಮುಂದುವರಿಯಬೇಕು. ಸ್ವಾಮಿ ವಿವೇಕಾನಂದ, ಎಪಿಜೆ ಅಬ್ದುಲ್ ಕಾಲಂ ಅವರ ಪುಸ್ತಕ ಓದಬೇಕು. ತಾವು ಓದುವ ಶಾಲೆ ಕಾಲೇಜುಗಳಿಗೆ ಹೆಸರನ್ನು ತಂದು ಜೀವನದಲ್ಲಿ ಸಂತೋಷದಿಂದ ಸಾಧನೆ ಮಾಡಿ ಉತ್ತಮ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಆಶೀರ್ವಚನ ನೀಡಿದರು.

ಶಿಶುಅಭಿವೃದ್ಧಿ ಯೋಜನಾಧಿಕಾರಿ ಗಾಯತ್ರಿದೇವಿ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಶಾಂತಲಾ ಸೋಮನಕಟ್ಟಿ ಹಾಗೂ ರೇಣುಕಾ ಭಾಜಿರಾಹುತ್ ಉಪನ್ಯಾಸ ನೀಡಿದರು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್ ಬಿ ಮಲ್ಲಾಡ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಾನಂದ ಭೂಮನ್ನವರ, ಪದ್ಮಾ ಕಿಲ್ಲೇದಾರ, ಭಾರತಿ ಕಾಲಶೆಟ್ಟಿ, ಪ್ರಕಾಶ ಮೇಲಿನಮನಿ, ನಾಗರತ್ನ ಯಲವಿಗಿ, ರೇಣುಕಾ ಮರಳುಸಿದ್ದೇಶ್ವರಮಠ, ಸವಿತಾ ಮುನವಳ್ಳಿ, ತುಳಸವ್ವ ಮಳಲಿ, ಅಕ್ಕಮ್ಮ ಹಿರೇಹೋಳಿ, ಪ್ರವೀಣ ಮೊರಬದ ಸೇರಿ ಇಲಾಖೆ ಸಿಬ್ಬಂದಿಗಳು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ವಿದ್ಯಾರ್ಥಿನಿಯರು ಭಾಗವಹಿಸಿದ್ದರು

# ಮಕ್ಕಳಿಗೆ ಗುಣಾತ್ಮ ಶಿಕ್ಷಣ, ಸಂಸ್ಕಾರ ಕಲಿಸಿ



**ಲೋಕಾಪುರ:** ಸರ್ಕಾರ ವಾಲ್ಮೀಕಿ ಸಮುದಾಯ ವಾಸಿಸುವ ಪ್ರತಿ ಗ್ರಾಮದಲ್ಲೂ ಸಮುದಾಯ ಭವನ ನಿರ್ಮಿಸಬೇಕು. ಆ ಮೂಲಕ ಸಮುದಾಯವು ಸಾಂಕ ಚಟುವಟಿಕೆ ಕೈಗೊಳ್ಳಲು ಅನುಕೂಲವಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ಹೇಳಿದರು.

ಸಮೀಪದ ವರ್ಚಗಲ್ ಗ್ರಾಮದಲ್ಲಿ ಸೋಮವಾರ ಸಂಜೆ ಸಮಾಜ ಕಲ್ಯಾಣ ಇಲಾಖೆ ಹಾಗೂ ನಿರ್ಮಿತ ಕೇಂದ್ರದಿಂದ ಅಂದಾಜು 30 ಲಕ್ಷ ರೂಗಳಲ್ಲಿ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರ ಪರಿಶಿಷ್ಟ ಜಾತಿ ಹಾಗೂ ಪಂಗಡದ ಮೀಸಲಾತಿ ಹೆಚ್ಚಿಸುವ ಮೂಲಕ ಸಾಮಾಜಿ- ಕ ನ್ಯಾಯದಡೆಗೆ ಹೆಜ್ಜೆ ಹಾಕಿದೆ. ಈ ಸಮುದಾಯಗಳ ಶೈಕ್ಷಣಿಕ ಹಾಗೂ ಆರ್ಥಿಕಾಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ತರಲಾಗಿದೆ ಎಂದರು.

ವರ್ಚಗಲ್ ಗ್ರಾಮದಲ್ಲಿ ವಾಲ್ಮೀಕಿ ಜನರ ಬಳಕೆಗೆ ಸಮುದಾಯ ನಿರ್ಮಿಸಿದ್ದು ಸಂತೋಷದ ಸಂಗತಿ. ಗ್ರಾಮದ ವಿದ್ಯಾವಂತ ಸಮುದಾಯ ಅದನ್ನು ಜ್ಞಾನ ದೇಗುಲದಂತೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಬಳಿಕ ಗ್ರಾಮದಲ್ಲಿ 18 ಲಕ್ಷ ರೂ. ವೆಚ್ಚದ ಅಂಗನವಾಡಿ ಕೇಂದ್ರದ ನಿರ್ಮಾಣ ಕಾಮಗಾರಿ ಉದ್ಘಾಟಿಸಿ ಮಾತನಾಡಿದ ಸಚಿವರು, ಇಂದಿನ ಈ ಕಾಲಘಟ್ಟದಲ್ಲಿ ಮಕ್ಕಳು ಮಾನವೀಯ ಬಾಂಧವ್ಯ ಕಡಿಮೆಗೊಳಿಸುತ್ತಿದ್ದಾರೆ. ಇದರಿಂದ ಸಮಾಜಕ್ಕೆ ಮಾರಕವಾಗುವ ದಿನಗಳು ದೂರವಿಲ್ಲ. ಈ ನಿಟ್ಟಿನಲ್ಲಿ ಅಂಗನವಾಡಿ ಕೇಂದ್ರಗಳು ಎಚ್ಚೆತ್ತುಕೊಂಡು ಗುಣಾತ್ಮಕ ಶಿಕ್ಷಣ, ಸಂಸ್ಕಾರ ಕಲಿಸುವ ಕೇಂದ್ರಗಳಾಗಬೇಕಿದೆ ಎಂದರು.

ಲೋಕಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಶೋಕ ಕಿವಡಿ ಮಾತನಾಡಿದರು.

ಬಿಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಶಿವಾನಂದ ಉದಪುಡಿ, ಗೋವಿಂದಪ್ಪ ಕೌಲಗಿ, ಲೋಕಣ್ಣಗೌಡ ವಿ. ಪಾಟೀಲ, ವಿಠ್ಠಲ ತುಳಸಿಗೇರಿ, ರಾಮನಗೌಡ ಪಾಟೀಲ, ಈರಪ್ಪ ಬಲ್ಕಿ, ವೆಂಕಪ್ಪ ಪೂಜಾರ, ಈರಣ್ಣ ಪೂಜಾರ, ಬಸಲಿಂಗಪ್ಪ ಕಟ್ಟಿ, ಬಸವರಾಜ ಹಣಗಲಿ, ಶ್ರೀಕಾಂತ ತುಳಸಿಗೇರಿ, ಲಂಕೇಶ ಮಾದರ, ಪುಂಡಲೀಕ ಮುತ್ತಣ್ಣವರ, ಯಂಕಣ್ಣ ಮುತ್ತಣ್ಣವರ, ಯಮನಪ್ಪ ಬುಡ್ರಿ, ಹಣಮಂತ ಮಾದರ, ತಹಸೀಲ್ದಾರ್ ಮಹಾದೇವ ಸನಮುರಿ, ತಾಲೂಕುಮಟ್ಟದ ಅಧಿಕಾ- ರಿಗಳಾದ ಇಒ ಉಮೇಶ ಸಿದ್ನಾಳ, ಮಹಹಮ್ಮದ ಹನೀಫ್ ತಹಸೀಲ್ದಾರ್, ಮಹೇಶ ದಂಡನ್ನವರ, ವಿಜಯಕುಮಾರ ಜಿ.ಕೆ., ವಿದ್ಯಾ ಕೋರೆವ್ವಗೋಳ, ಬಸವರಾಜ ಅಂಬಿಗೇರ, ರಾಘವೇಂದ್ರ ಕಳ್ಳಿಮನಿ, ವಿನೋದ ಸಂಕೆಣ್ಣವರ, ವರ್ಚಗಲ್ ಗ್ರಾಮಸ್ಥರು, ರೈತರು ಇದ್ದರು.

# ವೈದ್ಯಕೀಯ ವೃತ್ತಿಗೆ ಗೌರವ ತನ್ನಿ



**ಬಾಗಲಕೋಟೆ:** ವೈದ್ಯಕೀಯ ಶಿಕ್ಷಣ ಎನ್ನುವುದು ಹಣ ಗಳಿಕೆ ಉದ್ದೇಶವಲ್ಲ. ಸಮಾಜ ಸೇವೆಯ ಒಂದು ಭಾಗ. ಇದನ್ನು ಅರಿತು ಮುನ್ನಡೆಯಬೇಕು. ವೃತ್ತಿಗೆ ಗೌರವ ತರುವ ಕೆಲಸ ಆಗಬೇಕು ಎಂದು ಬಿವಿವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ಬೇವೂರ ಹೇಳಿದರು.

ನಗರದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಶತಾಬ್ದಿ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 2024-25 ಸಾಲಿನ ಎಂ.ಬಿ.ಬಿ.ಎಸ್. ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು.

ಕಲಿಕೆ ಹಂತದಲ್ಲಿ ಆಳವಾದ ಜ್ಞಾನ, ಪಾಂಡಿತ್ಯ ಸಾsಸಬೇಕು. ನಮಗಿಂತ ಹೆಚ್ಚು ಜ್ಞಾನ ಹೊಂದಿದವರೊಂದಿಗೆ ಚರ್ಚೆ ನಡೆಸಬೇಕು. ಅನುಭವ ಹೊಂದಿರೊಂದಿಗೆ ವೈದ್ಯರ ಸಲಹೆ, ಮಾರ್ಗದರ್ಶನ ಪಡೆದುಕೊಳ್ಳಬೇಕು ಎಂದರು.

ಅನೇಕ ಉದ್ದೇಶವಿಟ್ಟುಕೊಂಡು ಬಿವಿವಿ ಸಂಘದ ಸ್ಥಾಪನೆಯಾಗಿದೆ. ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯವು ರಾಜ್ಯದ ಅತ್ಯುತ್ತಮ ವೈದ್ಯಕೀಯ ಮಹಾವಿದ್ಯಾಲಯವಾಗಿ ಬೆಳೆದು ನಿಂತಿದೆ. ಈ ಬೆಳವಣಿಗೆಯಲ್ಲಿ ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅವಿಶ್ರಾಂತ ಪ್ರಯತ್ನ ಸ್ಮರಣೀಯವಾಗಿದೆ ಎಂದು ತಿಳಿಸಿದರು.

ಹಾಸ್ಟೆಲ್ ಕಮೀಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ (ಚಿತ್ತರಗಿ), ವೈದ್ಯಕೀಯ ಅsಕ್ಷಕ ಡಾ.ಶ್ರೀರಾಮ ಕೋರಾ, ಪ್ರಾಚಾರ್ಯ ಡಾ.ಭುವನೇಶ್ವರಿ ಯಳಮಲಿ ಇತರರು ಇದ್ದರು. ಡಾ.ಸಂಜೀವ ಕೊಳಗಿ ವಿದ್ಯಾರ್ಥಿಗಳಿಗೆ ಚರಕ ಶಪಥ ಪ್ರತಿಜ್ಞಾವಿs ಬೋsಸಿದರು. ಡಾ.ನಿರಂಜನ ನಿರೂಪಿಸಿದರು. ಡಾ.ಮಂಜುಳಾ ಪಾಟೀಲ ವಂದಿಸಿದರು.

# ಮೂಲ ಸೌಕರ್ಯ ಸಮರ್ಪಕವಾಗಿ ಒದಗಿಸಿ



**ಬಾಗಲಕೋಟೆ:** ಕುಡಿಯುವ ನೀರು, ಒಳ ಚರಂಡಿ, ನೀರು ಸೇರಿದಂತೆ ಮೂಲ ಸೌಕರ್ಯ ಸಮರ್ಪಕವಾಗಿ ಒದಗಿಸಬೇಕು ಎಂದು ನವನಗರದ ಕೊಳಚೆ ನಿರ್ಮೂಲನಾ ನಿವಾಸಿಗಳು ನಗರಸಭೆ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಮರೆವಣಿಗೆ ಮೂಲಕ ನಗರಸಭೆಗೆ ಆಗಮಿಸಿದ ನಿವಾಸಿಗಳು ನಗರಸಭೆಗೆ ಮುತ್ತಿಗೆ ಹಾಕಿದರು. ಅಲ್ಲದೇ ಅsಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಬಳಿಕ ಮನವಿ ಸಲ್ಲಿಸಿ ಕೂಡಲೇ ಮೂಲ ಸೌಕರ್ಯ ಒದಗಿಸಬೇಕು. ಇಲ್ಲವಾದಲ್ಲಿ ಹೋರಾಟ ಮುಂದುವರೆಯಲಿದೆ ಎಂದು ಎಚ್ಚರಿಕೆ ನೀಡಿದರು.

ರಾಜ್ಯ ಸರ್ಕಾರವು ಸ್ವಚ್ಛ ನಗರ, ಗುಡಿಸಲು ಮುಕ್ತಗೊಳಿಸಲು ಬಡವರಿಗೆ ರಾಜೀವ ಗಾಂs, ವಾಂಬೆ ಕಾಲೋನಿಯಲ್ಲಿ ಮನೆಗಳನ್ನು ಹಂಚಿಕೆ ಮಾಡಿದೆ. ಕಾಲೋನಿಗಳು ನಿರ್ಮಾಣಗೊಂಡು ಸಾವಿರಾರು ಸಂಖ್ಯೆಯಲ್ಲಿ ಜನರು ವಾಸ ಮಾಡುತ್ತಿದ್ದರು ಸಹ ಮೂಲ ಸೌಕರ್ಯದಿಂದ ವಂಚಿತವಾಗಿದ್ದೇವೆ. ಕುಡಿಯುವ ನೀರು, ರಸ್ತೆ, ಒಳಚರಂಡಿ ಸರಿಯಾಗಿ ಇಲ್ಲ. ಸ್ವಚ್ಛತೆ ಇಲ್ಲದ ಪರಿಣಾಮ ನಿತ್ಯವು ಮಕ್ಕಳು, ಹಿರಿಯರು, ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ನಗರಸಭೆ ಅsಕಾರಿಗಳು, ಶಾಸಕರು, ಸದಸ್ಯರು ಗಮನಿಸಿ ಪರಿಹ- ರಿಸಬೇಕು ಎಂದು ಆಗ್ರಹಿಸಿದರು.

ಮುಖಂಡರಾದ ರಾಜಬಂದೇಶ ನೆಡೋಣಿ, ರಫೀದ್ ಶೇಖ, ಯಮನಪ್ಪ ಅಂಬಗೇರ, ಈರಪ್ಪ ಮೇಟಿ, ಶಿವಲಿಂಗಪ್ಪ ಪೂಜಾರ, ಸಂಗು ಮಲದಿ ಇತರರು ಇದ್ದರು.

## ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ



**ಇಳಕಲ್ಲ(ಗ್ರಾ):** ಸರ್ಕಾರ ಕೊಡಮಾಡಿದ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಮಂಗಳವಾರ ಇಳಕಲ್ಲ- ಹುನಗುಂದ ಅವಳಿ ತಾಲೂಕಿನ ಮಾದಿಗ ಸಂಘಟನೆಗಳ ಒಕ್ಕೂಟದಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಬಸವೇಶ್ವರ ವೃತ್ತ ಜಮಾಯಿಸಿದ ಸಮಾಜದವರು ಅಲ್ಲಿಂದ ಬೃಹತ್ ಪ್ರತಿಭಟನಾ ಮೆರವಣಿಗೆಯಲ್ಲಿ ತಹಸೀಲ್ದಾರ್ ಕಚೇರಿಗೆ ತೆರಳಿ ಅಲ್ಲಿ ಸಭೆ ನಡೆಸಿದರು. ಬಳಿಕ ತಹಸೀಲ್ದಾರ್ ಸತೀಶ ಕೂಡಲಗಿಗೆ ಮನವಿ ಸಲ್ಲಿಸಿದರು.

ಬಿಸರಹಳ್ಳಿಯ ಮರಳುಸಿದ್ಧೇಶ್ವರ ಮಠದ ಮಳಿಯಯ್ಯಸ್ವಾಮಿಗಳು, ಸೂಡಿಮಠದ ಮರಳಸಿದ್ಧ ಮಹಾಸ್ವಾಮೀಜಿ, ಮಾದಿಗ ಮಹಾಸಭಾ ರಾಜ್ಯಾಧ್ಯಕ್ಷ ಮುತ್ತಣ್ಣ ಬೆನ್ನೂರ, ಶ್ರೀಕಾಂತ ಹೊಸಮನಿ, ಚಂದಪ್ಪ ಗುಡಗುಂಟಿ, ಶಾಂತಕುಮಾರ ಗೊರಬಾಳ, ಪುನೀತ್ ಹೊಸಮನಿ, ಬಿ. ಎಚ್. ಮಾದರ, ವಿರೇಶ ಹಿರೇಮನಿ, ಭರಮರೆಡ್ಡಿ ಚಿಂತಕಮಲದಿನ್ನಿ, ಮಂಜುನಾಥ ಮಾದರ, ಹೇಮಂತ ಭೂತ್ನಾಳ್, ಮಹಾಂತೇಶ ಹೊಸಮನಿ, ಮಂಜುನಾಥ ಮಾದರ, ಚಿದಾನಂದ ಹುಬ್ಬಳ್ಳಿ, ಬಿ. ಎಚ್. ಮಾದರ, ಶಾಂತು ಗೊರಬಾಳ, ಶಾಂತೂ ಮೂಕಿ ಸೇರಿ ಹಲವಾರು ಮಹಿಳೆಯರು ಸೇರಿದ್ದರು.

## ಗೌರಿ ಲಂಕೇಶ್ ಹತ್ಯೆ ಕೇಸ್ ಆರೋಪಿಗಳಿಗೆ ಸನ್ಮಾನ: ಅತ್ಯಂತ ಹೇಯ ಕೃತ್ಯ:ಸಚಿವ ಎಂ.ಬಿ. ಪಾಟೀಲ



**ವಿಜಯಪುರ, :** ಗೌರಿ ಲಂಕೇಶ್ ಹತ್ಯೆ ಕೇಸ್ ಆರೋಪಿಗಳಿಗೆ ಸನ್ಮಾನ ಮಾಡಿರುವುದು ಅತ್ಯಂತ ಹೇಯ ಕೃತ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಗೌರಿ ಲಂಕೇಶ್ ಹತ್ಯೆ ಕೇಸ್ ಆರೋಪಿಗಳಿಗೆ ವಿಜಯಪುರದಲ್ಲಿ ಸನ್ಮಾನ ಮಾಡಿದ ವಿಷಯಕ್ಕೆ ಪ್ರತಿಕ್ರಿಯೆ ನೀಡಿದ ಅವರು,

ಯಾರ ಜೀವ ತೆಗೆದುಕೊಳ್ಳಲು ಯಾರಿಗೂ ಹಕ್ಕಿಲ್ಲ. ಎಂ. ಎಂ. ಕಲಬುರ್ಗಿ ಅವರು ವಿಜಯಪುರದ ಮಗ, ಹೆಮ್ಮೆಯ ಪುತ್ರ. ನಮ್ಮ ಜಿಲ್ಲೆಯ ಒಬ್ಬ ಮೇಧಾವಿ, ಸಾಹಿತಿಯನ್ನು ಕೊಂದವರಿಗೆ ಇವರು ಸನ್ಮಾನ ಮಾಡಿರುವುದು ಇದೊಂದು ಹೇಯ ಕೃತ್ಯವಾಗಿದೆ ಎಂದಿದ್ದಾರೆ. ಯಾರು ಸ್ವಾಗತ ಮಾಡಿ ಸನ್ಮಾನ ಮಾಡಿದ್ದಾರೆ ಅವರು ಅರಿತುಕೊಳ್ಳಬೇಕು ಎಂದರು.

ಸಿದ್ಧಾರ್ಥ ವಿಹಾರ ಟ್ರಸ್ಟ್ ಸಿಎ ಸೈಟ್ ವಾಪಸ್ ವಿಚಾರ ನನಗೆ ಗೊತ್ತಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸಿದ್ದರಾಮಯ್ಯ ಬಂಧನ ಆಗಲ್ಲ. ಅವರು ಅಂಥ ತಪ್ಪು ಮಾಡಿಲ್ಲ ಎಂದು ಸಚಿವ ಎಂ.ಬಿ. ಪಾಟೀಲ ಹೇಳಿದರು.

# ಗಂಗಾಮತಸ್ಥರ ನಕಲಿ ಎಸ್ಟಿ ಪ್ರಮಾಣ ಪತ್ರಗಳನ್ನು ವಾಪಸ್ ಪಡೆಯಲಿ: ಶರಣಗೌಡ ಪಾಟೀಲ ಒತ್ತಾಯ



**ವಿಜಯಪುರ, :** ಹಿಂದುಳಿದ ಜಾತಿಯಲ್ಲಿ ಬರುವ ಅಂಬಿಗ, ಕಬ್ಬಲಿಗ, ಕೋಳಿ, ಗಂಗಾಮತ, ಡೋರ, ಟೋಕರೆಕೋಳಿ, ಗೊಂಡ ಹಾಗೂ ರಾಜಗೊಂಡ, ನಾಯ್ಕಡ್ ಜಾತಿಯವರು ಎಸ್ಟಿ ಪ್ರಮಾಣ ಪತ್ರ ಪಡೆದುಕೊಳ್ಳುತ್ತಿದ್ದು, ನಿಜವಾದ ಪರಿಶಿಷ್ಟ ಪಂಗಡ ಫಲಾನುಭವಿಗಳಾಗಿರುವ ವಾಲ್ಮೀಕಿ ಜನಾಂಗಕ್ಕೆ ಮೀಸಲಾತಿಯಲ್ಲಿ ಅನ್ಯಾಯ ಮಾಡಲಾಗುತ್ತಿದೆ. ಈಗಾಗಲೇ ನೀಡಿರುವ ಗಂಗಾ ಮತಸ್ಥರ ಎಸ್ಟಿ ಪ್ರಮಾಣ ಪತ್ರಗಳನ್ನು ವಾಪಸ್ ಪಡೆಯಬೇಕು ಎಂದು ಜಿಲ್ಲಾಧ್ಯಕ್ಷ ಶರಣಗೌಡ ಪಾಟೀಲ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯಕ್ಕೆ

ಸಂಬಂಧಿಸಿದಂತೆ ಪರಿಶಿಷ್ಟ ಪಂಗಡಕ್ಕೆ ಸೇರಿದ ನಾಯ್ಕಡ್, ನಾಯಕ, ಬೇಡ, ಬೇಡರ, ಹಾಗೂ ವಾಲ್ಮೀಕಿ ಜಾತಿಗಳ ಪರ್ಯಾಯ ಪದವಾದ ಪರಿವಾರ ಮತ್ತು ತಳವಾರ ಪರಿಶಿಷ್ಟ ಪಂಗಡದ ಸೌಲಭ್ಯ ನೀಡಬಹುದಾಗಿದೆ ಎಂದು ಹೇಳಿದೆ. ಆದರೆ ಉತ್ತರ ಕರ್ನಾಟಕದಲ್ಲಿ ತಳವಾರ-ಪ- ರಿವಾರ ಎಂದರೆ ಗಂಗಾ ಮತಸ್ಥರಿಗೆ ಕರೆಯುತ್ತಾರೆ. ಅದನ್ನೇ ಬಳಸಿಕೊಂಡು ಗಂಗಾಮತಸ್ಥರು ವಾಲ್ಮೀಕಿ ಸಮುದಾಯಕ್ಕೆ ಸಿಗಬೇಕಾಗಿದ್ದ ಮೀಸಲಾತಿ ಸೌಲಭ್ಯವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಅದರಲ್ಲೂ ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಅವರ ಮೇಲೆ ಒತ್ತಡ ಹಾಕಿ ಕಲಂ 88ನ್ನು ತೆಗೆದು ಹಾಕಿ ಗಂಗಾ ಮತಸ್ಥರಿಗೆ ಮೀಸಲಾತಿ ಸಿಗುವಂತೆ ಮಾಡಿಕೊಂಡಿದ್ದಾರೆ. ಇದು ಸಂವಿಧಾನದ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಾಲ್ಮೀಕಿ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಜೀವ್ ಕುಮಾರ ನಾಯ್ಕೋಡಿ ಮಾತನಾಡಿ, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಗೆಜೆಟ್ ಜಾರಿಗೆ ತರಲು ಸಾಧ್ಯವಿಲ್ಲ. ಅದು ಸರ್ಕಾರ ಮಟ್ಟದಲ್ಲಿ ಚರ್ಚೆ ಮಾಡಿಯೇ ಜಾರಿಗೆ ಬರುತ್ತದೆ. ವಾಲ್ಮೀಕಿ ಜನಾಂಗದವರು ಮುಖ್ಯಮಂತ್ರಿಗಳ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ಸುಳ್ಳು ಹೇಳುವುದು ಸರಿ ಅಲ್ಲ ಎಂದರು.

ಈ ಸಂದರ್ಭದಲ್ಲಿ ಸಂಸ್ಥಾಪಕ ಅಧ್ಯಕ್ಷ ಮಲ್ಲಿಕಾರ್ಜುನ ಬಟಗಿ, ಜಿಲ್ಲಾಧ್ಯಕ್ಷ ಈರಪ್ಪ ಯಡಹಳ್ಳಿ, ಲಕ್ಷ್ಮಣ ಕೋಳೂರಗಿ, ನಾಗಪ್ಪ ನಾಯ್ಕೋಡಿ, ನಿಂಗಪ್ಪ ನಾಟೀಕಾರ, ಅರ್ಜುನ ನಾಯ್ಕೋಡಿ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ಜೆಡಿಎಸ್ ಸದಸ್ಯತ್ವ ನೋಂದಣಿ ಅಭಿಯಾನ ಯಶಸ್ವಿಗೊಳಿಸಿ : ಮಾಜಿ ಶಾಸಕ ಡೊಂಗರಗಾಂವ



**ಅಥಣಿ :** ಸದಸ್ಯತ್ವ ಅಭಿಯಾನ ಮೂಲಕ ಕ್ಷೇತ್ರದಲ್ಲಿ ಜೆಡಿ- ಎಸ್ ಪಕ್ಷ ಸಂಘಟನೆಗಾಗಿ ಆದ್ಯತೆ ನೀಡಲಾಗುತ್ತಿದೆ. ಜೆಡಿ- ಎಸ್ ಸದಸ್ಯತ್ವ ಅಭಿಯಾನವನ್ನು ಯಶಸ್ವಿಗೊಳಿಸಲು ಮುಖಂಡರು ಹಾಗೂ ಕಾರ್ಯಕರ್ತರು ಶ್ರಮಿಸಬೇಕು ಎಂದು ಜೆಡಿಎಸ್ ರಾಜ್ಯ ಹಿರಿಯ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಶಹಾಜಹಾನ ಡೊಂಗರಗಾಂವ ಹೇಳಿದರು

ಅವರು ಪಟ್ಟಣದಲ್ಲಿರುವ ತಮ್ಮ ನಿವಾಸದಲ್ಲಿ ರವಿವಾರ ನಡೆದ ಜೆಡಿಎಸ್. ಪಕ್ಷದ ಸಭೆಯಲ್ಲಿ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಪಕ್ಷದ ಬಲವರ್ಧನೆಗಾಗಿ ಸದಸ್ಯತ್ವ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ತಾಲೂಕಿನಲ್ಲಿ ಸುಮಾರು 5,000 ಜನರನ್ನು ಸದಸ್ಯತ್ವ ಮಾಡಿಸುವ ಗುರಿ ಹೊಂದಲಾಗಿದೆ. ಬಿಜೆಪಿ-ಜೆಡಿ- ಎಸ್ ಮೈತ್ರಿ ಇದ್ದರೂ ನಮ್ಮ ಪಕ್ಷವನ್ನು ಸಂಘಟನಾತ್ಮಕವಾಗಿ ಬಲಪಡಿಸುವುದು ಪ್ರತಿಯೊಬ್ಬ ಕಾರ್ಯಕರ್ತರ ಜವಾಬ್ದಾರಿ ಎಂದರು. ಸದಸ್ಯತ್ವ ಅಭಿಯಾನ ಮೂಲಕ ತಾಲೂಕಿನಲ್ಲಿ ಪಕ್ಷ ಸಂಘಟನೆಗಾಗಿ ಆದ್ಯತೆ ನೀಡಲಾಗುತ್ತಿದೆ. ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಯನ್ನು ಗಮನ ದಲ್ಲಿಟ್ಟುಕೊಂಡು ಜೆಡಿಎಸ್ ಪಕ್ಷವನ್ನು ಸಂಘಟನಾತ್ಮಕವಾಗಿ ಬೇರು ಮಟ್ಟದಿಂದ ಬಲಗೊಳಿಸಲು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದರು.

ಕುವಾರಸ್ವಾಮಿಯುವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಅವರ ಜನಪ್ರಿಯ ಯೋಜನೆಗಳು ಹಾಗೂ ರೈತರ ಸಾಲ ಮನ್ನಾ ಮಾಡುವ ಮೂಲಕ ಅನೇಕ ಕ್ರಾಂತಿಕಾರಿಕ ಯೋಜನೆಗಳನ್ನು ಕೈಗೊಂಡಿದ್ದರು, ಪಕ್ಷವನ್ನು ಬಲಿಷ್ಠಗೊಳಿಸಲು ತಳಮಟ್ಟದಲ್ಲಿ ಸಂಘಟನೆಗೆ ಆದ್ಯತೆ ನೀಡುವ ಮೂಲಕ ಕುಮಾರಸ್ವಾಮಿ ಅವರ ಕೈಬಲಪಡಿಸಬೇಕು

ಮುಂದಿನ ದಿನಗಳಲ್ಲಿ ಸ್ಥಳೀಯ ಕಾರ್ಯಕರ್ತರ ಸಹಕಾರ ಹಾಗೂ ಪಕ್ಷ ತೊರೆದಿರುವ ಮುಖಂಡರನ್ನು ಮತ್ತೆ ಪಕ್ಷಕ್ಕೆ ವಾಪಸ್ಸು ತರುವ ಮೂಲಕ ಬೂತ್ ಮಟ್ಟದಿಂದ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಈ ವೇಳೆ ಜೆಡಿಎಸ್ ತಾಲೂಕಾ ಅಧ್ಯಕ್ಷ ಮಹಾಂತೇಶ ಅವಟಿ. ಡಾ. ಜಗದೀಶ ಮಿರಜಕರ. ಶಬ್ಬೀರಗೌಡಾ ಪಾಟೀಲ. ಶ್ರೀಶೈಲ ಕಾಡದೇವರಮಠ. ವಿದ್ಯಾಧರ ನಾಡಗೌಡ. ಚಿಕ್ಕಪ್ಪ ಧರಿಗೌಡ. ಪರಮಾನಂದ ಮೋನಪ್ಪಗೋಳ. ಶ್ರೀಶೈಲ ಸೌದಾಗರ ಇಮ್ತಿಯಾಜ್ ಹಿಪ್ಪರಗಿ. ರಾಜು ಡವರಿ. ಸದ್ದಾಂ ಕರಿಶಾಬು. ಅಪ್ಪಾಸಾಹೇಬ ತೇರದಾಳ ಸೇರಿದಂತೆ ಹಲವರು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಚಿವ ಎಂ.ಬಿ. ಪಾಟೀಲ ಹಣಕಾಸು ನೆರವು



**ವಿಜಯಪುರ, ;** ನೀಟ್ ಪಾಸಾಗಿ ಸರಕಾರಿ ಕೋಟಾದಡಿ ಎಂ.ಬಿ.ಬಿ.ಎಸ್. ಸೀಟು ಪಡೆದರೂ ಶುಲ್ಕ ಭರಿಸಲಾಗದೆ ಹಣದ ಸಮಸ್ಯೆ ಎದುರಿಸುತ್ತಿದ್ದ ಐದು ಜನ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ಕೋರ್ಸಿಗೆ ಅಗತ್ಯವಾಗಿರುವ ಸಂಪೂರ್ಣ ಆರ್ಥಿಕ ನೆರವು ನೀಡುವ ಮೂಲಕ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಸಹಾಯ ಹಸ್ತ ಚಾಚಿದ್ದಾರೆ.

ಸೋಮವಾರ ವಿಜಯಪುರದಲ್ಲಿ ಇರುವ ಗೃಹ ಕಚೇರಿಯಲ್ಲಿ ತಿಕೋಟಾ ತಾಲೂಕಿನ ಬಾಬಾನಗರದ ವಿಶಾಲ ರಾಯಗೊಂಡ ಕೋರೆಗಾಂವ, ಅರಕೇರಿಯ ಕರಣ ಪಂಡಿತ ಸಿಂಧೆ ಮತ್ತು ಯಶವಂತ ಮಾರುತಿ ಮೋಹಿತೆ, ಬಬಲೇಶ್ವರ ತಾಲೂಕಿನ ಕಾರಜೋಳ ತಾಂಡಾದ ಅಜೀತ ಪರಶುರಾಮ ರಾಠೋಡ ಹಾಗೂ ಕಂಬಾಗಿಯ ರಾಜಶ್ರೀ ಮಲ್ಲಿಕಾರ್ಜುನ ಮಠ ಅವರಿಗೆ ಸಚಿವರು ಮೊದಲ ಕಂತಾಗಿ ಎಂ. ಬಿ. ಬಿ. ಎಸ್. ಕೋರ್ಸಿನ ಮೊದಲ ವರ್ಷದ ಬೋಧನೆ ಶುಲ್ಕ, ಹಾಸ್ಟೆಲ್ ಶುಲ್ಕ ಮತ್ತು ಊಟದ ಶುಲ್ಕಕ್ಕೆ ಅಗತ್ಯವಾಗಿರುವ ಹಣದ ಚೆಕ್ ವಿತರಿಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಸಲಹೆಗಾರ ಮತ್ತು ಡೀಮ್ಡ್ ವಿಶ್ವವಿದ್ಯಾಲಯದ ರಜಿಸ್ಟ್ರಾರ್ ಡಾ. ಆರ್. ವಿ ಕುಲಕರ್ಣಿ, ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತ ಕಚೇರಿಯ ಅಧೀಕ್ಷಕ ಎಸ್. ಎ. ಬಿರಾದಾರ(ಕನ್ನಾಳ) ಹಾಗೂ ವಿದ್ಯಾರ್ಥಿಗಳ ಪೋಷಕರು ಉಪಸ್ಥಿತರಿದ್ದರು.

ಬಾಬಾನಗರದ ವಿದ್ಯಾರ್ಥಿ ವಿಶಾಲ ಕೋರೆಗಾಂವ ನೀಟ್ ಪರೀಕ್ಷೆಯಲ್ಲಿ 72357ನೇ ಪಡೆದಿದ್ದು, ಚಿತ್ರದುರ್ಗ ವೈದ್ಯಕೀಯ ಕಾಲೇಜಿನಲ್ಲಿ ಸೀಟು ಪಡೆದಿದ್ದಾನೆ. ಈ ವಿದ್ಯಾರ್ಥಿಯ ತಂದೆ ರಾಯಗೊಂಡ ಮತ್ತು ತಾಯಿ ವಿಲಾಸಮತಿ ರೈತರಾಗಿದ್ದು, ಬಡಕುಟುಂಬಕ್ಕೆ ಸೇರಿದ್ದಾರೆ. ಈ ವಿದ್ಯಾರ್ಥಿಯ ಕೋರ್ಸಿನ ಪ್ರಥ- 'ಮ ವರ್ಷದ ಬೋಧನೆ, ಹಾಸ್ಟೇಲು ಮತ್ತು ಊಟದ ವೆಚ್ಚ ಸೇರಿ ಮೊದಲ ಕಂತಿನ ರೂ. 1 ಲಕ್ಷ 54 ಸಾವಿರದ 600 ಚೆಕ್ ನ್ನು ಸಚಿವರು ವಿತರಿಸಿದರು.

ಇದೇ ವೇಳೆ ಅರಕೇರಿಯ ವಿದ್ಯಾರ್ಥಿ ಕರಣ ಸಿಂಧೆ ನೀಟ್ ಪರೀಕ್ಷೆಯಲ್ಲಿ 75075ನೇ ರ್‍ಯಾಂಕ್ ಪಡೆದಿದ್ದು, ಹಾವೇರಿ ಮೆಡಿಕಲ್ ಕಾಲೇಜಿನಲ್ಲಿ ಸೀಟು ಪಡೆದಿದ್ದಾನೆ. ಈ ವಿದ್ಯಾರ್ಥಿಯ ತಂದೆ ಪಂಡಿತ ಮತ್ತು ಬಾನಾಬಾಯಿ ಕೂಲಿ ಕಾರ್ಮಿಕರಾಗಿದ್ದಾರೆ. ಈ ವಿದ್ಯಾರ್ಥಿಯ ಕಾಲೇಜು, ಹಾಸ್ಟೇಲು ಹಾಗೂ ಊಟದ ಶುಲ್ಕ ಸೇರಿ ಒಟ್ಟು ರೂ. 1 ಲಕ್ಷ 91 ಸಾವಿರದ 250 ಚೆಕ್ ನ್ನು ಸಚಿವರು ವಿತರಿಸಿದರು.

ಇದೇ ಗ್ರಾಮದ ಮತ್ತೋರ್ವ ವಿದ್ಯಾರ್ಥಿ ಯಶವಂತ ಮೋಹಿತೆ ನೀಟ್ ಪರೀಕ್ಷೆಯಲ್ಲಿ 92618ನೇ ರ್‍ಯಾಂಕ್ ಪಡೆದಿದ್ದು, ಶಿವಮೊಗ್ಗ ಮೆಡಿಕಲ್ ಕಾಲೇಜಿಗೆ ಆಯ್ಕೆಯಾಗಿದ್ದಾನೆ. ಈತನ ತಂದೆ ಮಾರುತಿ ದರ್ಜಿ(ಟೇಲರ್) ಆಗಿದ್ದು, ತಾಯಿ ವಂದನಾ ಗೃಹಿಣಿಯಾಗಿದ್ದಾರೆ. ಈ ವಿದ್ಯಾರ್ಥಿಯ ಕಾಲೇಜು, ಹಾಸ್ಟೇಲು ಹಾಗೂ ಊಟದ ಶುಲ್ಕ ರೂ. 3 ಲಕ್ಷ 9 ಸಾವಿರದ 321 ಚೆಕ್ ನ್ನು ಸಚಿವರು ವಿತರಿಸಿದರು.

ಬಬಲೇಶ್ವರ ತಾಲೂಕಿನ ಕಾರಜೋಳ ತಾಂಡಾದ ಅಜೀತ ರಾಠೋಡ ನೀಟ್ ಪರೀಕ್ಷೆಯಲ್ಲಿ 139412 ರ್‍ಯಾಂಕ್ ಪಡೆದಿದ್ದು, ಕಾರವಾರ ಸರಕಾರಿ ವೈದ್ಯಕೀಯ ಕಾಲೇಜಿನಲ್ಲಿ ಸೀಟು ಪಡೆದಿದ್ದಾನೆ. ಈತನ ತಂದೆ ಪರಶುರಾಮ ಮತ್ತು ತಾಯಿ ಪ್ರೇಮಾ ಕೃಷಿ ಕಾರ್ಮಿಕರಾಗಿದ್ದು, ಉದ್ಯೋಗ ಅರಸಿ ಮಹಾರಾಷ್ಟ್ರಕ್ಕೆ ಗುಳೆ ಹೋಗುತ್ತಿರುತ್ತಾರೆ. ಈತನ ಕಾಲೇಜು ಮತ್ತು ಹಾಸ್ಟೇಲ್ ಶುಲ್ಕಕ್ಕೆ ಅಗತ್ಯವಾದ ರೂ. 1 ಲಕ್ಷ 35 ಸಾವಿರ ಹಣದ ಚೆಕ್ ನ್ನು ಸಚಿವರು ವಿತರಿಸಿದರು.

ಬಬಲೇಶ್ವರ ತಾಲೂಕಿನ ಕಂಬಾಗಿ ಗ್ರಾಮದ ವಿದ್ಯಾರ್ಥಿನಿ ರಾಜಶ್ರೀ ಮಠ ನೀಟ್ ಪರೀಕ್ಷೆಯಲ್ಲಿ 56262ನೇ ಪಡೆದಿದ್ದು, ಚಿಕ್ಕಬಳ್ಳಾಪುರ ಮೆಡಿಕಲ್ ಕಾಲೇಜಿನಲ್ಲಿ ಸೀಟು ಪಡೆದಿದ್ದಾಳೆ.

ಈಕೆಯ ತಂದೆ ಮಲ್ಲಿಕಾರ್ಜುನ ಮತ್ತು ತಾಯಿ ಜಯಶ್ರೀ ರೈತರಾಗಿದ್ದಾರೆ. ಈ ವಿದ್ಯಾರ್ಥಿನಿಯ ಕಾಲೇಜು, ಹಾಸ್ಟೇಲು ಹಾಗೂ ಊಟದ ಶುಲ್ಕ ರೂ. 1 ಲಕ್ಷ 56 ಸಾವಿರದ 815 ಚೆಕ್ ನ್ನು ಸಚಿವರು ವಿತ- ರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಂ. ಬಿ. ಪಾಟೀಲ ಅವರು ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಪೋಷಕರು, ಊರು, ಜಿಲ್ಲೆ ಮತ್ತು ರಾಜ್ಯಕ್ಕೆ ಹೆಸರು ತರಬೇಕು. ವೈದ್ಯರಾದ ನಂತರ ಉತ್ತಮ ಸೇವೆ ಸಲ್ಲಿಸಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳ ಪೋಷಕರು ಮಾತನಾಡಿ, ಬಡವರಾದ ಮಕ್ಕಳ ಭವಿಷ್ಯ ಬಗ್ಗೆ ಚಿಂತೆ ಉಂಟಾಗಿತ್ತು. ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ನಮ್ಮ ಮಕ್ಕಳು ಎಂ.ಬಿ.ಬಿ. ಎಸ್. ಸೀಟು ಪಡೆದರೂ ಹಣವಿಲ್ಲದ ಕಾರಣ ಸಂಕಷ್ಟದಲ್ಲಿದ್ದೇವು. ಇಂಥ ಕಠಿಣ ಪರಿಸ್ಥಿತಿಯಲ್ಲಿ ಸಚಿವ ಎಂ. ಬಿ. ಪಾಟೀಲ ಅವರು ನಮ್ಮ ಪಾಲಿಗೆ ದೇವರ ರೂಪದಲ್ಲಿ ಬಂದು ಆಪದ್ಬಾಂಧವರಾಗಿದ್ದಾರೆ. ಆರ್ಥಿಕ ನೆರವು ನೀಡುವ ಮೂಲಕ ಸಹಾಯ ಹಸ್ತ ಚಾಚಿ ನಮ್ಮ ಮಕ್ಕಳು ವೈದ್ಯರಾಗಬೇಕು ಎಂಬ ಕನಸು ನನಸಾಗಲು ಕಾರಣರಾಗಿದ್ದಾರೆ. ಅವರಿಗೆ ಸದಾ ಋಣಿಯಾಗಿದ್ದೇವೆ. ದೇವರು ಅವರಿಗೆ ಸದಾ ಒಳಿತನ್ನು ಮಾಡಲಿ ಎಂದು ಹೇಳಿದರು.

ಈ ಮುಂಚೆಯಿಂದಲೂ ಬಡ ವಿದ್ಯಾರ್ಥಿಗಳು ವೈದ್ಯರಾಗುವ ಕನಸಿಗೆ ನೆರವು ನೀಡುತ್ತ ಬಂದಿರುವ ಸಚಿವ ಎಂ. ಬಿ. ಪಾಟೀಲ ಅವರು ಕಳೆದ ತಿಂಗಳು ಇಬ್ಬರು ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳಿಗೆ ಕಾಲೇಜು ಮತ್ತು ಹಾಸ್ಟೇಲಿನ ಶುಲ್ಕವನ್ನು ಭರಿಸಿ ನೆರವಾಗಿದ್ದರು. ಇಂದು ಮತ್ತೆ ಐದು ವಿದ್ಯಾರ್ಥಿಗಳಿಗೆ ಸಹಾಯಹಸ್ತ ಚಾಚುವ ಮೂಲಕ ನೆರವಾಗಿದ್ದಾರೆ.

# ಶ್ರೀರಾಮನಗರದಲ್ಲಿ ಮಹರ್ಷಿ ವಾಲ್ಮೀಕಿ ಭಾವಚಿತ್ರ ಭವ್ಯ ಮೆರವಣಿಗೆ

● ವಾರ್ತಾಲೋಕ ವಾರ್ತೆ

**ಗಂಗಾವತಿ: ಅ 19.** ತಾಲ್ಲೂಕಿನ ಶ್ರೀರಾಮನಗರದಲ್ಲಿ ಶನಿವಾರದಂದು ಮಹರ್ಷಿ ವಾಲ್ಮೀಕಿ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು.

ವಾಲ್ಮೀಕಿ ಜಯಂತಿ ಪ್ರಯುಕ್ತ ಗ್ರಾಮವು ಸೇರಿದಂತೆ ಸುತ್ತಲಿನ ಗ್ರಾಮಸ್ಥರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆಯು ಗ್ರಾಮದ ಶ್ರೀದೇವಿ ಹೋಟೇಲ್ ನಿಂದ ಪುನೀತ್ ಸರ್ಕಲ್ ಮೂಲಕ ವಾಲ್ಮೀಕಿ ವೃತ್ತದವರೆಗೆ ನೆರವೇರಿಸಲಾಯಿತು. ಪೂರ್ಣಕುಂಭ ಹೊತ್ತ ಮಹಿಳೆಯರು ಮೆರವಣಿಗೆಗೆ ಮೆರಗು ತಂದರು. ಡಿಜೆ ಹಾಡುಗಳಿಗೆ ಯುವಕರು ಕುಣಿದು ಕುಪ್ಪಳಿಸಿದರು.



ವಾಲ್ಮೀಕಿ ಭಾವಚಿತ್ರಕ್ಕೆ ಜೆಸಿಬಿ ಮೂಲಕ ಮಾಲಾರ್ಪಣೆ ನೆರವೇರಿಸಿದ್ದು ವಿಶೇಷವಾಗಿತ್ತು. ಮೆರವಣಿಗೆ ನಂತರ ಅನ್ನಸಂತರ್ಪಣೆ ಕಾರ್ಯಕ್ರಮ ನೆರವೇರಿಸಲಾಯಿತು.

ಈ ವೇಳೆ ಗ್ರಾಮದ ಹಿರಿಯ ಮುಖಂಡರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷರಾದ ರೆಡ್ಡಿ ಶ್ರೀನಿವಾಸ್ ಅವರು ವಾಲ್ಮೀಕಿ ಭಾವಚಿತ್ರಕ್ಕೆ ಮಾಲಾರ್ಪಣೆ ನೆರವೇರಿಸಿದರು..

ಕಾರ್ಯಕ್ರಮದಲ್ಲಿ ವಾಲ್ಮೀಕಿ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧಕ್ಷರಾದ ಡಾ.ವಿ.ಎನ್. ಪಾಟೀಲ್, ಗ್ರಾಪಂ ಸದಸ್ಯರಾದ ಮೆಹಬೂಬ್,

ಬಿಜೆಪಿ ಮುಖಂಡರಾದ ಪಾಪಾರಾವ್ , ಬರಗೂರು ದುರ್ಗಾರಾವ್, ಶ್ರೀರಾಮನಗರದ ವಾಲ್ಮೀಕಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ದುರ್ಗಪ್ಪ ನಾಯಕ, ಉಪಾಧ್ಯಕ್ಷ ಹನುಮೇಶ ನಾಯಕ ಹಾಗೂ ಸಂಘದ ಸರ್ವ ಸದಸ್ಯರು, ಸಮುದಾಯದ ಹಿರಿಯ ಮುಖಂಡರು, ಸಮುದಾಯದ ಯುವಕರು, ಗ್ರಾಮಸ್ಥರು ಭಾಗವಹಿಸಿದ್ದರು.

**ವಾಲ್ಮೀಕಿ ಭವನ ಪೂರ್ಣ ನಿರ್ಮಾಣಕ್ಕೆ ಸಹಕರಿಸಿ:**
ಈ ವೇಳೆ ಸಂಘದ ಅಧ್ಯಕ್ಷ ದುರ್ಗಪ್ಪ ನಾಯಕ ಮಾತನಾಡಿ, ಗ್ರಾಮದಲ್ಲಿ ಸದ್ಯ ಇರುವ ವಾಲ್ಮೀಕಿ ಭವನ ಚಿಕ್ಕದಾಗಿದೆ, ಇದರಿಂದ ಮದುವೆ ಇನ್ನಿತರೆ ಸಭೆ ಸಮಾರಂಭಗಳನ್ನು ನಿರ್ವಹಿಸಲು ಸರಿಹೊಗುತ್ತಿಲ್ಲ. ಪೂರ್ಣ ಪ್ರಮಾಣದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ವಿಶಾಲವಾದ ಜಾಗವಿದ್ದು ಸಚಿವರಾದ ಶಿವರಾಜ್ ತಂಗಡಗಿ ಅವರು ಹಾಗೂ ಗ್ರಾಮದ ಹಿರಿಯ ಮುಖಂಡರ ಸಹಕಾರದಿಂದ ಸಮುದಾಯ ಭವನದ ಕಟ್ಟಡ ಪೂರ್ಣ ನಿರ್ಮಾಣವಾಗಬೇಕೆಂದು ಮನವಿ ಮಾಡಿಕೊಂಡರು.
ವರದಿ : ಅಬ್ದುಲ್ ವಾಹಿದ್ ಮುನಿರಾಬಾದ್ ಡ್ಯಾಂ

# ಬೀಡಾಡಿ ದನಗಳ ಆಶ್ರಯ ತಾಣವಾದ ಡಾಕ್ಟರ್ ರಾಜಕುಮಾರ್ ರಸ್ತೆ

● ವಾರ್ತಾಲೋಕ ವಾರ್ತೆ

**ಬಳ್ಳಾರಿ :ಅ 19.** ನಗರದಲ್ಲಿ ಎಲ್ಲಾ ಕಡೆ ಬೀಡಾಡಿ ದನಗಳು ರಸ್ತೆಯಲ್ಲಿ ಎಲ್ಲೆಂದರಲ್ಲಿ ಮಲಗಿಕೊಂಡು ಓಡಾಡಿಕೊಂಡು ವಾಹನ ಸವಾರರಿಗೆ ಮತ್ತು ಪಾದಚರಿಗಳಿಗೆ ಪ್ರಾಣ ಕಂಟಕವಾಗಿವೆ, ಇವುಗಳನ್ನು ಹಿಡಿದು ಊರ ಹೊರಗೆ ಸಾಗಿಸಲು ಕ್ರಮ ಕೈಗೊಳ್ಳಬೇಕು ಇಲ್ಲವೇ ಅವುಗಳ ಮಾಲೀಕರಿಗೆ ಆ ಪಶುಗಳನ್ನು ರಸ್ತೆಗೆ ಬಿಡದಂತೆ ಅವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ನಗರದ ಸಾರ್ವಜನಿಕರು ಮಹಾನಗರ ಪಾಲಿಕೆ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.



ಪ್ರಮುಖವಾಗಿ ನಗರದ ಡಾ. ರಾಜಕುಮಾರ್ ರಸ್ತೆಯ ಎಂ ಜಿ ಸರ್ಕಲ್ ನಿಂದ ತಾರಾನಾಥ ಆಸ್ಪತ್ರೆಯ ವರೆಗೆ ಪ್ರತಿದಿನ ನೂರಾರು ಬೀಡಾಡಿ ದನಗಳು ರಸ್ತೆಯ ಮೇಲೆ ಇರುತ್ತವೆ. ಮತ್ತು ಬಹಳಷ್ಟು ಸಲ ರಸ್ತೆಯ ಮಧ್ಯದಲ್ಲಿ ಮಲಗಿಕೊಂಡಿರುತ್ತವೆ, ರಾತ್ರಿ ವೇಳೆಯಲ್ಲಿ ವಿದ್ಯುತ್ ವ್ಯತ್ಯಾಯ ಸಂದರ್ಭದಲ್ಲಿ ವಾಹನ ಸವಾರರಿಗೆ ಅವುಗಳು ಕಾಣದೆ ಪಶುಗಳಿಗೆ ಡಿಕ್ಕಿಯಾಗಿ ಕೆಳಗೆ ಬಿದ್ದು ಅಪಘಾತಗಳಾಗಿವೆ.

ಅಷ್ಟೇ ಅಲ್ಲದೆ ಗೂಳಿಗಳು ಆಗಾಗ ನಡೆಸುವ ಬೀದಿ ಕಾಳಗದಲ್ಲಿ ವಾಹನ ಸವರಾರು ಮತ್ತು ಪಾದಾಚಾರಿಗಳು ಅವುಗಳ ಘರ್ಷಣೆಗೆ ಸಿಲುಕಿ ಅಪಘಾತಗಳಾಗಿ ಕೈಕಾಲು ಬಿರುದುಕೊಂಡ ಉದಾರಣೆಗಳು ಬಹಳಷ್ಟು ಜರುಗಿವೆ, ಈ ಕುರಿತು ನಗರದ ಸಾರ್ವಜನಿಕರು ಹಲವಾರು ಸಲ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಮೌಕಿಕವಾಗಿ ದೂರನ್ನು ನೀಡಿದರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಾರ್ವಜನಿಕರು ಮತ್ತು ಸಂಘ ಸಂಸ್ಥೆಯ ಪದಾಧಿಕಾರಿಗಳು ಪಾಲಿಕೆಯ ಅಧಿಕಾರಿಗಳ ಮೇಲೆ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

# ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ : ಕೊಟ್ಟೂರು ತಾಲೂಕು ಅಧ್ಯಕ್ಷ ತಗ್ಗಿನಕೇರಿ ಕೊಟ್ರೇಶ್

● ವಾರ್ತಾಲೋಕ ವಾರ್ತೆ

**ಕೊಟ್ಟೂರು : ಅ19.** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರದಂದು ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ಪ್ರಥಮ ತಾಲೂಕು ಸಮ್ಮೇಳನ ನಡೆಸಲಾಯಿತು.

ಕೊಟ್ಟೂರು ತಾಲೂಕು ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ಪ್ರಥಮ ಸಮ್ಮೇಳನವನ್ನು ಎ ಐ ಡಿ ಆರ್ ಎಂ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಸಂತೋಷ್ ಎಚ್ ಎಂ ರವರು ಹಲೆಗೆ ಬಾರಿಸುವ ಮೂಲಕ ಸಮ್ಮೇಳನಕ್ಕೆ ಚಾಲನೆ ನೀಡಿದರು. ಈ ದೇಶದಲ್ಲಿ ಪರಿಶಿಷ್ಟ ಪಂಗಡ – ಪರಿಶಿಷ್ಟ ಜಾತಿ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ. ಈ ದೌರ್ಜನ್ಯದಿಂದ ಹೊರಬರಲು ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ಸಂಘಟನೆಯು ನಿಮಗೆ ರಕ್ಷಣೆ ನೀಡುತ್ತದೆ. ಈ ಸಂಘಟನೆ ಉದ್ದೇಶ ಏನೆಂದರೆ ಅನ್ಯಾಯದಿಂದ ಒಳಗಾದ ಶೋಷಿತ ವರ್ಗದ ಜನರಿಗೆ ನ್ಯಾಯ ಕೊಡಿಸುವುದು ಮತ್ತು





ಅವರ ಪರವಾಗಿ ಕೆಲಸ ಮಾಡುವ ಸಂಘಟನೆ ಆಗಿದೆ. ದಲಿತರ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ. ಉತ್ತರ ಪ್ರದೇಶದಲ್ಲಿ ಅತ್ಯಾಚಾರ,ಕೊಲೆ ನಡೆಯುತ್ತಿದೆ.

ಹಾಗೂ ಕೊಪ್ಪಳ ಜಿಲ್ಲೆಯಲ್ಲಿ ಕ್ಷೌರಿಕ ಅಂಗಡಿಯ ಮಾಲೀಕ ಕಟಿಂಗ್ ಮಾಡು ಎಂದಿದ್ದಕ್ಕೆ ಆ ದಲಿತ ಯುವಕನನ್ನು ಹತ್ಯೆ ಮಾಡುತ್ತಾನೆ ಇದರಿಂದ ದಲಿತರು ಜಾಗೃತರಾಗಬೇಕು ಶಿಕ್ಷಣವಂತರಾಗಬೇಕು. ಯಾವುದೇ ಸಮುದಾಯದ ಜನರಿಗೆ ಅನ್ಯಾಯವಾದರೆ ಅವರ ಪರವಾಗಿ ಧ್ವನಿ ಎತ್ತುವ ಕೆಲಸ ಎ ಐ ಡಿ ಆರ್ ಎಂ ಸಂಘಟನೆ ಮಾಡಬೇಕು.

ಕೊಟ್ಟೂರು ತಾಲೂಕು ಸಂಪೂರ್ಣವಾಗಿ ಸರ್ವೆ ಮಾಡಿ ನೋಡಿದರೆ

ಇನ್ನಾದರೂ ದಲಿತರಿಗೆ ವಸತಿ ವ್ಯವಸ್ಥೆ ವಂಚಿತರಾಗಿದ್ದಾರೆ. ಮತ್ತು ಈ ಭಾಗದಲ್ಲಿ ಶೈಕ್ಷಣಿಕ ಸಮಸ್ಯೆ ಬಗ್ಗೆ ಗಮನ ಹರಿಸಬೇಕು ಸರ್ಕಾರವು ಒಂದು ವೇಳೆ ಎಲ್ಲವನ್ನು ಖಾಸಗೀಕರಣ ಮಾಡಿದರೆ ನಾವು ಸೌಲಭ್ಯದಿಂದ ವಂಚಿತರಾಗಬೇಕಾಗುತ್ತದೆ. ಡಾಕ್ಟರ್ ಬಿ ಆರ್ ಅಂಬೇಡ್ಕರ್ ಅವರ ಚಿಂತನೆಯಾದ ಸಾಮಾಜಿಕ ವ್ಯವಸ್ಥೆ ಹಾಗೂ ನವಾ ಸಮಾಜ ಕಟ್ಟುವ ಕೆಲಸ ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ಸಂಘಟನೆ ಮಾಡುತ್ತದೆ ಎಂದು ಹೇಳಿದರು.

ನಂತರ ಕೊಟ್ಟೂರು ತಾಲೂಕು ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ಸಂಘಟನೆಯ ಗೌರವ ಅಧ್ಯಕ್ಷರಾಗಿ ಪೂಜಾರ್ ಅಜ್ಜಯ್ಯ, ತಾಲೂಕು ಅಧ್ಯಕ್ಷರಾಗಿ ತೆಗ್ಗಿನಕೇರಿ ಕೊಟ್ರೇಶ್, ಉಪಾಧ್ಯಕ್ಷರಾಗಿ ಆರ್.ಪ್ರಸಾದ್, ಪ್ರಧಾನ ಕಾರ್ಯದರ್ಶಿಯಾಗಿ ಅಂಜಿನಿ, ಸಹ ಕಾರ್ಯದರ್ಶಿ ತುಳುಶ್ ನಾಯಕ್, ಸಂಘಟನೆ ಕಾರ್ಯದರ್ಶಿ ಕಿರಣ್, ಸದಸ್ಯರಗಳಾಗಿ

ಟಿ ರಾಜಶೇಖರ್, ಕಾರ್ತಿಕ್, ಪುನೀತ್, ಸಂತೋಷ್, ರವಿ ಕೆ ನಾಗರಾಜ್, ಪಿ ಚಂದ್ರಶೇಖರ್, ಕೆ ಕೊಟ್ರೇಶ್ ಸದಸ್ಯರುಗಳಾಗಿ ಆಯ್ಕೆಗೊಂಡರು.

ದ್ವಾರಕೇಶ್ ಅವರು ಕಮಿನಿಷ್ಟ್ ಸಿದ್ಧಾಂತದ ಸೊಗಸಾದ ಹಾಡುಗಳನ್ನು ಹಾಡಿದ್ದು ಕಾರ್ಯಕ್ರಮಗೆ ಮೆರುಗು ಬಂದಿತು

ಈ ಸಂದರ್ಭದಲ್ಲಿ ಅಖಿಲ ಭಾರತ ದಲಿತ ಹಕ್ಕುಗಳ ಆಂದೋಲನ ವಿಜಯನಗರ ಜಿಲ್ಲೆಯ ಸಹ ಕಾರ್ಯದರ್ಶಿ ಸುರೇಶ್ ಹಲಗಿ, ಕೊಟ್ಟೂರು ತಾಲೂಕು ಕಾರ್ಯದರ್ಶಿ ಕೆ ರೇಣುಕಮ್ಮ, ಪಿ ಚಂದ್ರಶೇಖರ್, ಕೆ ಕೊಟ್ರೇಶ್, ಹನುಮಕ್ಕ, ಬಿ ರೇಣುಕಮ್ಮ, ಭಜಂತ್ರಿ ಮಂಜುನಾಥ್ ಹಾಗೂ ಇತರೆ ಉಪಸ್ಥಿತರಿದ್ದರು.

ವರದಿ ಪರಶುರಾಮ್.

# ಗ್ರಾಮ ಗ್ರಾಮಗಳಲ್ಲಿ ತಲೆಯತ್ತಿ ನಿಂತ ನಮ್ಮ ಕರ್ನಾಟಕ ಸೇನೆ



● ವಾರ್ತಾಲೋಕ ವಾರ್ತೆ

**ಹುಣಸಗಿ :ಅ 19.** ಮಾನ್ಯ ಬಸವರಾಜ ಪಡುಕೋಟೆಯವರ ಸಾರಥ್ಯದಲ್ಲಿ ಸ್ಥಾಪನೆಗೊಂಡ ಕನ್ನಡಪರ ಸಂಘಟನೆಯಾದ ನಮ್ಮ ಕರ್ನಾಟಕ ಸೇನೆ.. ರಾಜ್ಯದ ಮೂಲೆ ಮೂಲೆಗಳಲ್ಲಿ ತನ್ನದೆ ಛಾಪು ಮೂಡಿಸುತ್ತಿದೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಮ್ಮ ಕರ್ನಾಟಕ ಸೇನೆಯ ತಾಲ್ಲೂಕ ಅಧ್ಯಕ್ಷರಾದ ಮಾನ್ಯ ಭೀಮನಗೌಡ ಪೋಲಿಸ್ ಪಾಟೀಲ ಅವರ ಮುಂದಾಳತ್ವದಲ್ಲಿ, ಹುಣಸಗಿ ತಾಲ್ಲೂಕಿನ ಕಾರ್ಮಿಕರ ಹಿತ ರಕ್ಷಣೆಗಾಗಿ ಕಾರ್ಮಿಕ ಸಂಘಟನಾ ಅಧ್ಯಕ್ಷರನ್ನು ಆಯ್ಕೆ ಮಾಡಲಾಯ್ತು. ಇಂದು ನಮ್ಮ ಕರ್ನಾಟಕ ಸೇನೆಯ ತಾಲ್ಲೂಕ ಕಾರ್ಮಿಕ ಸಂಘಟನೆಯ ಅಧ್ಯಕ್ಷರನ್ನಾಗಿ ಮಾನ್ಯ ಸಿದ್ದಣ್ಣ.ಎನ್. ಕುಂಬಾರ ಇವರನ್ನ ಸರ್ವಾನುಮತದಿಂದ ಆಯ್ಕೆ ಮಾಡಲಾಯ್ತು. ಈ ಸಂದರ್ಭದಲ್ಲಿ ಗದ್ದೆಪ್ಪ ದೊರಿ ಬೊಮ್ಮನಗುಡ್ಡ ಮತ್ತು ಮುಂತಾದ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವರದಿ:ಡಾ.ನಂದುಪೂಜಾರಿ

# ಶ್ರೀ ಮಹರ್ಷಿ ವಾಲ್ಮೀಕಿ ಗೆಳೆಯರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಮಾರುತಿ ನಾಯಕ ಆಯ್ಕೆ

● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ: ಅ 19** .ಕೂಡ್ಲಿಗಿ ತಾಲೂಕಿನ ಚಂದ್ರಶೇಖರಪುರ ಗ್ರಾಮದ ಶ್ರೀ ಮಹರ್ಷಿ ವಾಲ್ಮೀಕಿ ಗೆಳೆಯರ ಸಹಕಾರ ಸಂಘದ ನೂತನ ಅಧ್ಯಕ್ಷ,ಉಪಾಧ್ಯಕ್ಷ , ಕಾರ್ಯದರ್ಶಿ, ಖಜಾಂಚಿ, ಹಾಗೂ ಇತರೆ ಸದಸ್ಯರನ್ನಾಗಿ ಗ್ರಾಮದ ಮಹರ್ಷಿ ವಾಲ್ಮೀಕಿ ಸಮುದಾಯದ ಹಿರಿಯರ ಮಾರ್ಗದರ್ಶನದಂತೆ ಗ್ರಾಮದ ಆಂಜನೇಯ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ವಾಲ್ಮೀಕಿ ಭಾವಚಿತ್ರಕ್ಕೆ ಪೂಜೆ ಪುಷ್ಪಾರ್ಚನೆ ಮಾಡಿದ ನಂತರ ನೂತನ ಸಂಘಟನೆಯ ಕುರಿತು ಸಭೆ ಸೇರಿ ಹಿರಿಯರ ತಿರ್ಮಾನದಂತೆ ಶ್ರೀ ವಾಲ್ಮೀಕಿ ಗೆಳೆಯರ ಸಹಕಾರ ಸಂಘಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಟಿ.ಎಂ.ಮಾರುತಿ ನಾಯಕ,ಗೌರವ ಅಧ್ಯಕ್ಷರಾಗಿ ಪಾಪಣ್ಣ ಬಿ,ಉಪಾಧ್ಯಕ್ಷರಾಗಿ ಮಂಜು ಕಿಚ್ಚ, ಕಾರ್ಯದರ್ಶಿ ಮಹೇಶ ಮಾಳಗಿ,ಸಂಘಟನಾ ಕಾರ್ಯದರ್ಶಿ ಪಿ ತಿಪ್ಪೇಸ್ವಾಮಿ,

ಖಜಾಂಜಿ ಮಹಾಂತೇಶ್ ಸಿ, ಆಯ್ಕೆಯಾದರೆ *ಸದಸ್ಯರನ್ನಾಗಿ* ಮಲಿ ಜಾತಪ್ಪ,ಎಲೆ



ಮಾರಪ್ಪ,

ಕೆ ಓ ರುದ್ರಪ್ಪ, ಚಂದ್ರಪ್ಪ ಡಿ, ಎಂ,ಪ್ರಹ್ಲಾದ ಎಸ್,ಸವಾಲು ನಿಂಗಪ್ಪ,ಶಾಂತಪ್ಪ ಮಾಳಗಿ, ಕೆ ಎಂ ಚಿತ್ತಪ್ಪ ,ಕೆ ಮಾರೇಶ /ಜಾರ ಜಿ ಹನುಮಂತಪ್ಪ ,ಅಂಜಿನಿ ಪೂಜಾರಿ ,ನರಸಿಂಹ ಎನ್, ಕುಮಾರ ಸಿ,ಕುಮಾರಸ್ವಾಮಿ ಡಿ,ಶಶಿಕುಮಾರ ಸಿ.ಪಿ,ಎಸ್ ವಿಜಯ (ಟ್ಯಾಂಕಿ),ಟಿ ಪಾಪಯ್ಯ, ಕೋಟಿ ಎಂ ವಿಜಯಕುಮಾರ್,ತಿಪ್ಪೇಸ್ವಾಮಿ ಎಂ ಪಿ,ಬಸವರಾಜ ಎಂ ಒ,

ರೇಣಪ್ಪ,ಎಸ್,ಕೆ ಎನ್ ಗೋವಿಂದ,ದುರ್ಯೋಧನ ಎಸ್ ಎಂ,ಚಂದ್ರಪ್ಪ ಡಿ,

ಮಂಜುನಾಥ ,ಸಿ ತಿಪ್ಪೇಸ್ವಾಮಿ,ಮಾರೇಶ (ಜನಗಿರಿ),ಮಾರೇಶ ಎಸ್ ಬಿ (ಕೆಎಸ್ಸಾರ್ಟಿಸಿ),ಎಸ್ ಮಹಾಂತೇಶ, ಎಸ್ ಮಹೇಶ್,ಓಬಳೇಶ (ಕುಂಟರಂಗಯ್ಯನವರ್) ರವಿ ಎಲ್ ಓ ,ಕೆ ಮಹಾಂತೇಶ್,

ರಾಜೇಶ ಕೆ ಎಂ ,ಚಂದ್ರ ಜಿ,

ಮಾರಣ್ಣ ಗಂಡಯ್ಯನವರ್,

ಶಿವಪ್ಪ ಎಸ್,ಗುರುಸ್ವಾಮಿ ಡಿ ಎಂ, ಓಬಳೇಶ್ (ದೊರಗಾರು)

ಚಿದಾನಂದ ಇವರುಗಳನ್ನು ಗ್ರಾಮದ ಎಲ್ಲಾ ಸಮುದಾಯದ ಹಿರಿಯರು,ಯುವಕರ, ಒಪ್ಪಿಗೆ ಮೇರೆಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು ಎಂದು ನೂತನ ಅಧ್ಯಕ್ಷ ಎನ್ ಮಾರುತಿನಾಯಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವರದಿ ಹೆಚ್ಚು ವೀರಣ್ಣ.

# ಯತಿ ನರಸಿಂಹ ನಂದ ಸ್ವಾಮಿ ವಿರುದ್ಧ

## ಕಠಿಣ ಕಾನೂನು ಕ್ರಮ ಕೈಗೊಳ್ಳಿ ವಖ್ಫ್ ಬೋರ್ಡ್ ಅಧ್ಯಕ್ಷ ಹುಮಾಯುನ್ ಖಾನ್ ಅಗ್ರಹ

● ವಾರ್ತಾಲೋಕ ವಾರ್ತೆ

**ಬಳ್ಳಾರಿ: ಅ 19** ಪ್ರವಾದಿ ಮಹಮ್ಮದ್ ಪೈಗಂಬರ್ ವಿರುದ್ಧ ಅವಹೇಳನಕಾರಿಯಾಗಿ ನಿಂದನೆ ಮಾಡಿದ ಉತ್ತರಪ್ರದೇಶದ ಯತಿ ನರಸಿಂಹಾನಂದ ಸರಸ್ವತಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಿ ಎಂದು ಆಗ್ರಹಿಸಿ ಮುಸ್ಲಿಮ್ ಸಮುದಾಯ ಮುಖಂಡರು ಹಾಗೂ ಬಳ್ಳಾರಿ ಜಿಲ್ಲಾ ವಖ್ಫ್ ಬೋರ್ಡ್ ಅಧ್ಯಕ್ಷ ಹುಮಾಯುನ್ ಖಾನ್ ಮತ್ತು ಖಾಜಿ ಮಹಮ್ಮದ್ ಗುಲಾಮಿ ಸಿದ್ದಿಕಿ ಅವರು ಆಗ್ರಹಿಸಿದ್ದಾರೆ.

ಇಂದು ಮುಸ್ಲಿಂ ಜನಾಂಗದ ನೂರಾರು ಮುಖಂಡರುಗಳೊಂದಿಗೆ ಬಳ್ಳಾರಿ ಜಿಲ್ಲಾ ಎಸ್ ಪಿ ಮತ್ತು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗೆ ಮನವಿ ಪತ್ರ ಸಲ್ಲಿಸಿದ ಅವರು, ಉತ್ತರ ಪ್ರದೇಶದಲ್ಲಿ ಸ್ವಾಮಿ ನರಸಿಂಹಾನಂದ ಮುಸ್ಲಿಮರ ಆರಾಧಕ ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಇದು ಸಮಸ್ತ ಮುಸ್ಲಿಮರಿಗೆ ನೋವುಂಟು ಮಾಡಿದೆ, ಅಷ್ಟೇ ಅಲ್ಲದೆ ಇಂತಹ ಹೇಳಿಕೆಗಳು ಕೋಮು ಪ್ರಚೋದನೆ ಮತ್ತು ಸಮಾಜದಲ್ಲಿ ಅಶಾಂತಿ ಸೃಷ್ಟಿಸುವಂತಹ ಹೇಳಿಕೆಗಳಾಗಿವೆ ಇದರಿಂದ ಕೋಮು ಕೋಮುಗಳ ನಡುವೆ ಸಂಘರ್ಷಗಳು ಏರ್ಪಟ್ಟು ಶಾಂತಿ ಭಂಗವಾಗಲಿದೆ ಎಂದು



ಆಕ್ರೋಶ ವ್ಯಕ್ತಪಡಿಸಿ

ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಸಮಾಜದಲ್ಲಿ ಶಾಂತಿಯುತ ಸಹ ಬಾಳ್ವಿಗೆ ಅನುಕೂಲ ಮಾಡಿಕೊಡಬೇಕೆಂದು ವಿನಂತಿಸಿದರು. ಇಂತಹ ಕ್ಷುಲ್ಲಕವಾದ ಹೇಳಿಕೆಗಳನ್ನು ನೀಡಿರುವ ಯತಿ ನರಸಿಂಹ ನಂದ ಸ್ವಾಮೀಜಿ ವಿರುದ್ಧ ರಾಷ್ಟ್ರಪತಿಗಳು ಹಾಗೂ ಉತ್ತರ ಪ್ರದೇಶ ಸರ್ಕಾರ ಕಠಿಣ ಕಾನೂನು ಕ್ರಮ ಜರುಗಿಸಬೇಕು ಮತ್ತು ಅವರಿಗೆ ಗಲ್ಲುಶಿಕ್ಷೆ ವಿಧಿಸಬೇಕು ತನ್ಮೂಲಕ ಕೋಮುಪ್ರಚೋದನೆ ಮಾಡುವುದನ್ನು ತಡೆಯಬೇಕು ಮತ್ತು ಸಮಾಜದಲ್ಲಿ ಶಾಂತಿ ಕದಡುವ ಹೇಳಿಕೆ ನೀಡುವವರ ವಿರುದ್ಧ ಶಿಸ್ತು ಕ್ರಮ ಜರುಗಿಸಿ ಅಂತವರಿಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು. ಕೂ

ಈ ಸಂದರ್ಭದಲ್ಲಿ ಅಲ್ಲಾಭಕಾಶ್, ನೂರ ಅಹ್ಮದ್, ಜಾಹಿರ್ , ಎಂ ಡಿ ಆಸಿಫ್, ಮುಜಾಹಿದ್, ಖಬರ್ ಸ್ಥಾನ ಖಲೀಲ್, ಮಹಮ್ಮದ್ ಅಲಿ, ಮನ್ಸೂರ್ , ಹರ್ಷದ್, ಸಮೀರ್, ಫೇರೋಜ್ ತೌಸೀಫ್, ಸಪರೇಜ್, ದಾದಾ, ಸಲ್ಮಾನ್ ಸರ್ಫರಾಜ್, ಧರ್ಮ ಗುರುಗಳಾದ ಹಫೀಜ್ ಮುಬೀನ್ ಸೇರಿದಂತೆ ಮಸೀದಿಗಳ ಮುಖವಲ್ಲಿಗಳು ಹಾಗೂ ಹಫೀಜ್ ಗಳು ಹಾಗೂ ಮುಸ್ಲಿಂ ಸಮುದಾಯದ ನೂರಾರು ಮುಖಂಡರುಗಳು ಉಪಸ್ಥಿತರಿದ್ದರು.

# ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗೆ ಒಪ್ಪಿಸಿ ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

● ವಾರ್ತಾಲೋಕ ವಾರ್ತೆ

**ಬಳ್ಳಾರಿ :,ಅ.19** ಸಂಡೂರು ವಿಧಾನಸಭೆ ಉಪಚುನಾವಣೆ–2024ರ ಅಂಗವಾಗಿ ಸಂಡೂರು ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾವಣೆಯನ್ನು ಶಾಂತಿಯುತವಾಗಿ ನಡೆಸಲು ಭಾರತೀಯ ಶಸ್ತ್ರಾಸ್ತ್ರ ಕಾಯ್ದೆ 1959 ಕಲಂ (4), ಕಲಂ (21) ಮತ್ತು ಕಲಂ 24–ಎ(1) ಅಡಿಯಲ್ಲಿ ಸಂಡೂರು ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಶಸ್ತ್ರಾಸ್ತ್ರವನ್ನು ಹೊಂದಿರುವವರು (ಫೈರ್ ಆರ್ಮ್ಸ್) ಗಳನ್ನು ತಕ್ಷಣದಿಂದಲೇ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ನ.25 ರ ವರೆಗೆ ಠೇವಣಿ ಮಾಡುವಂತೆ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ



ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ರಾಷ್ಟ್ರೀಕೃತ ಬ್ಯಾಂಕ್‌ಗಳು, ರಿಸರ್ವ್ ಬ್ಯಾಂಕ್ ಅವರಿಂದ ಅನುಮೋದಿಸಿದ ಶೆಡ್ಯೂಲ್ ಬ್ಯಾಂಕ್‌ಗಳ ಸೆಕ್ಯೂರಿಟಿ ಗಾರ್ಡ್ಗಳ ಆಯುಧಗಳನ್ನು ಹೊರತುಪಡಿಸಲಾಗಿದೆ

ಸಂಡೂರು ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸಂಡೂರು ತಾಲ್ಲೂಕು, ವೇಣಿ ವೀರಾಪುರ, ಕುಡತಿನಿ (ಬಳ್ಳಾರಿ ತಾಲ್ಲೂಕು), ತಿಮ್ಮಲಾಪುರ, ಏಳುಬೆಂಚಿ (ಕುರುಗೋಡು ತಾಲ್ಲೂಕು) ವ್ಯಾಪ್ತಿಯ ಫೈರಿಂಗ್ ಹಾರ್ಮ್ಸ್ ಗಳನ್ನು ತಮ್ಮ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಠೇವಣಿ ಮಾಡಬೇಕು.

ಸಾರ್ವಜನಿಕರು ಪಡೆದ 'ಪರವಾನಗಿ ಪಡೆದ ಶಸ್ತ್ರಾಸ್ತ್ರಗಳ ಠೇವಣಿ' ಯಿಂದ ವಿನಾಯಿತಿ ಪಡೆಯಲು ಬಯಸುವವರು ಅ.22 ರೊಳಗಾಗಿ ತಮ್ಮ ಮನವಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು. ಸಾರ್ವಜನಿಕರಿಂದ ಸ್ವೀಕೃತವಾದ ಮನವಿಗಳನ್ನು ಕ್ಲೀನಿಂಗ್ ಕಮಿಟಿಯಲ್ಲಿ ಪರಿಶೀಲಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ಆದರೂ ಕಮಿಟಿಯ ನಿರ್ಣಯವು ಅಂತಿಮವಾಗಿರುತ್ತದೆ ಎಂದು ಮಿಶ್ರ ತಿಳಿಸಿದ್ದಾರೆ.

ಸಿ.ಆರ್.ಪಿ.ಸಿ ಕಾಯ್ದೆ 1973 ಕಲಂ 144 ರಡಿ ಯಾವುದೇ ಶಸ್ತ್ರಾಸ್ತ್ರ ಪರವಾನಿಗೆದಾರರು ಅವುಗಳನ್ನು ಚುನಾವಣೆ ಸ್ಥಳ ಮತ್ತು ಸಾರ್ವಜನಿಕ ಸ್ಥಳದಲ್ಲಿ ಹೊತ್ತೊಯ್ಯುವುದು ಮತ್ತು ಪ್ರದರ್ಶನ ಮಾಡುವುದನ್ನು ನಿಷೇಧಿಸಿದೆ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಸಕಾಲ ಸಮನ್ವಯ ಸಮಿತಿ ಸಭೆ ಕಾಲಹರಣ ಮಾಡಿ ಅರ್ಜಿಗಳನ್ನು ವಜಾಗೊಳಿಸದಿರಿ: ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣಪ್ಪ

● ವಾರ್ತಾಲೋಕ ವಾರ್ತೆ

**ಹೊಸಪೇಟೆ (ವಿಜಯನಗರ) ಅಕ್ಟೋಬರ್ 19 (ಕ.ವಾ):** ಸಕಾಲ ತಂತ್ರಾಂಶದಲ್ಲಿ ಸ್ವೀಕರಿಸಲಾದ ಅರ್ಜಿಗಳನ್ನು ಅನಾವಶ್ಯಕವಾಗಿ ಕಾಲಹರಣ ಮಾಡಿ ವಜಾಗೊಳಿಸಬಾರದು ಎಂದು ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಕ್ಟೋಬರ್ 19 ರಂದು ಜಿಲ್ಲಾ ಮಟ್ಟದ ಸಕಾಲ ಸಮನ್ವಯ ಸಮಿತಿ ಸಭೆಯನ್ನು ಗೂಗಲ್ ಮೀಟ್ ಮುಖಾಂತರ ನಡೆಸಿ ಅವರು ಮಾತನಾಡಿದರು.

ಸಕಾಲದಲ್ಲಿ ಸ್ವೀಕೃತಿಯಾಗುವ ಅರ್ಜಿಗಳನ್ನು ಕಾಲಮಿತಿಯೊಳಗೆ ಬಗೆಹರಿಸಬೇಕು, ಅರ್ಜಿಗಳನ್ನು ಹೆಚ್ಚಿನ ದಿನಗಳ ಕಾಲ ಅನಾವಶ್ಯಕವಾಗಿ ಕಾಯ್ದಿರಿಸಿಕೊಳ್ಳಬಾರದು. ತಂತ್ರಾಂಶದಲ್ಲಿ ತೊಂದರೆ ಯಾದರೆ ಸಂಬಂಧಿಸಿದ ಅಧಿಕಾರಿಯನ್ನು ಸಂಪರ್ಕಿಸಿ ಸಮಸ್ಯೆ ಬಗೆಯರಿಸಿಕೊಳ್ಳಿ ಎಂದು ಹೇಳಿದರು.

ಕಾರ್ಮಿಕ ಇಲಾಖೆಯಲ್ಲಿ 40, ನಗರಸಭೆ ವ್ಯಾಪ್ತಿಯಲ್ಲಿ 26, ಆರ್.ಟಿ.ಓ ಕಚೇರಿಯಲ್ಲಿ 8 ಅರ್ಜಿಗಳು ಸೇರಿದಂತೆ ಕಂದಾಯ ಇಲಾಖೆ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳು ಸೇರಿ ಒಟ್ಟು 407 ಅರ್ಜಿಗಳಿಗೆ ಅವಧಿ ಮೀರಿದ್ದು ಅವುಗಳನ್ನು ಕೂಡಲೆ ಇತ್ಯಾರ್ಥ ಮಾಡದಿದ್ದರೆ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.

ಸೆಪ್ಟಂಬರ್ ತಿಂಗಳಲ್ಲಿ ಕಂದಾಯ ಇಲಾಖೆಯಲ್ಲಿ 2405, ಕಾರ್ಮಿಕ ಇಲಾಖೆಯಲ್ಲಿ 450, ಆರ್.ಟಿ.ಓ ಕಚೇರಿಯಲ್ಲಿ 158, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆಯಲ್ಲಿ 103 ಅರ್ಜಿಗಳು ಹಾಗೂ ವಿವಿಧ ಇಲಾಖೆಗಳು ಸೇರಿ ಒಟ್ಟು 3810 ಅರ್ಜಿಗಳು ವಜಾಗೊಂಡಿವೆ. ಯಾವುದೇ ಅರ್ಜಿಯನ್ನು ಸುಕಾ ಸುಮ್ಮನೇ ವಜಾಗೊಳಿಸಬಾರದು ಎಂದರು.

ಅರ್ಜಿ ಸಲ್ಲಿಸುವಾಗ ತಪ್ಪು ಮಾಹಿತಿ ಅಥವಾ ಸರಿಯಾದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅಂತಹ ಅರ್ಜಿಯನ್ನು ವಜಾಗೊಳಿಸಬೇಕಾಗುತ್ತದೆ ಎಂದು ಅಧಿಕಾರಿಗಳು ಸೂಚಿಸಿದರು.

ಅರ್ಜಿಗಳನ್ನು ಸ್ವೀಕರಿಸಿದ ನಂತರ ಸರಿಯಾಗಿ ಪರೀಕ್ಷಿಸಿ, ಅರ್ಜಿದಾರರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಅದಾಗ್ಯೂ ಪರಿಹಾರವಾಗದಿದ್ದಲ್ಲಿ ಅಂತಹ ಅರ್ಜಿಗಳನ್ನು ವಜಾಗೊಳಿಸಿ ಎಂದು ತಿಳಿಸಿದರು.

ಗೂಗಲ್ ಮೀಟ್‌ನಲ್ಲಿ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದರು.

VARTHALOKA Kannada Daily Morning News Paper Printed at NIKHIL OFFSET PRINTES Ward No. 23, Buddha Circle, Hosalli Main Road, GANGAVATHI-583227. Dist: Koppal,
Editor & Published by Mohammed jeelan. G., Rajasab Compound, Opp. Kulayappa Building, 1st Cross, Patel Nagar, HOSPET Dist : Vijaynagar, Mob. No.: 9482156289 E-Mail: Varthalokahpt@gmail.com